# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 | ಸಂಚಿಕೆ – 169 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 18–01–2024 ಗುರುವಾರ | ಪುಟ: 4 | ಬೆಲೆ : ರೂ.2–00
Volume - 01 | Issue - 169 | Title- Code: KARKAN 28269 | Chitradurga | Date: 18-01-2024 Thursday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಸಂಚಾರಿ ನಿಯಮ ಪಾಲಿಸಿ; ಅಪಘಾತ ಕಡಿಮೆಗೊಳಿಸಿ 2

ಫೆಬ್ರವರಿ 24ಕ್ಕೆ ಹಿರಿಯೂರು ತೇರು ಮಲ್ಲೇಶ್ವರ ಸ್ವಾಮಿ ಬ್ರಹ್ಮ ರಥೋತ್ಸವ 3

ಸಾಮರಸ್ಯತೆ ಮೂಡಿಸುವಲ್ಲಿ ಸಿದ್ಧರಾಮೇಶ್ವರರ ಚಿಂತನೆ ಸಹಕಾರಿ 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ನಮ್ಮ ಜೀವನದ ಕೆಲವೊಂದು ಕೆಟ್ಟ ಸಂದರ್ಭಗಳೇ ನಮ್ಮ ದಲಾವಣೆಗೂ ಬೆಳವಣಿಗೆಗೂ ಸ್ಫೂರ್ತಿಯಾಗುತ್ತದೆ.

» ಶುಭೋದಯ

## ಭಾರತ ಚುನಾವಣಾ ಆಯೋಗದಿಂದ ರಾಷ್ಟ್ರೀಯ ಮಟ್ಟದ ಪ್ರಶಸ್ತಿ ಪ್ರಕಟ

# ಯುವ ಮತದಾರರ ಸೇರ್ಪಡೆ; ಅತ್ಯುತ್ತಮ ಕಾರ್ಯ




» **ಚಿತ್ರದುರ್ಗ**

ಭಾರತ ಚುನಾವಣಾ ಆಯೋಗವು 2023 ನೇ ಸಾಲಿನಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯಕ್ರಮ ನಿಮಿತ್ತ ಯುವ ಮತದಾರರನ್ನು ಮತದಾರರ ಪಟ್ಟಿಗೆ ಸೇರ್ಪಡೆಗೊಳಿಸುವ ಕಾರ್ಯಕ್ರಮವನ್ನು ಅತ್ಯುತ್ತಮವಾಗಿ ಕೈಗೊಂಡಿದ್ದಕ್ಕಾಗಿ ಚಿತ್ರದುರ್ಗ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಅವರು ರಾಷ್ಟ್ರೀಯ ಮಟ್ಟದ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.

ಭಾರತ ಚುನಾವಣಾ ಆಯೋಗ ಅತ್ಯುತ್ತಮ ಚುನಾವಣಾ ಅಭ್ಯಾಸಗಳನ್ನು ಪ್ರೋತ್ಸಾಹಿಸಲು ಪ್ರತಿ ವರ್ಷ ರಾಷ್ಟ್ರೀಯ ಮತದಾರರ ದಿನಾಚರಣೆ ಅಂಗವಾಗಿ ನೀಡುವ ರಾಷ್ಟ್ರಮಟ್ಟದ ಪ್ರಶಸ್ತಿಗೆ ಕರ್ನಾಟಕ ರಾಜ್ಯದ ಇಬ್ಬರು ಅಧಿಕಾರಿಗಳು ಭಾಜನರಾಗಿದ್ದಾರೆ.

2023ನೇ ಸಾಲಿನ ರಾಷ್ಟ್ರ ಮಟ್ಟದ ಪ್ರಶಸ್ತಿಗಳಿಗೆ ಸಾಮಾನ್ಯ ಪ್ರಶಸ್ತಿ ವರ್ಗದಡಿಯಲ್ಲಿ ಚಿತ್ರದುರ್ಗ ಜಿಲ್ಲೆಯ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿರುವ ದಿವ್ಯಾ ಪ್ರಭು ಜಿ.ಆರ್.ಜೆ. ಹಾಗೂ ಅತ್ಯುತ್ತಮವಾಗಿ ಕಾರ್ಯ ನಿರ್ವಹಿಸಿದ ಸರ್ಕಾರಿ ಇಲಾಖೆ ಅಥವಾ ಸಂಸ್ಥೆಗಳಿಗೆ ನೀಡುವ ಪ್ರಶಸ್ತಿಗೆ ವಾಣಿಜ್ಯ ತೆರಿಗೆ ಇಲಾಖೆಯ ಆಯುಕ್ತರಾದ ಶಿಖಾ ಸಿ. ಅವರು ಪ್ರಶಸ್ತಿಗೆ ಭಾಜನರಾಗಿದ್ದಾರೆ.

ದಿವ್ಯಾ ಪ್ರಭು ಅವರು ಮತದಾರರ ಪಟ್ಟಿ ನಿರ್ವಹಣೆಯಲ್ಲಿ ಯುವ ಮತದಾರರ ನೋಂದಣಿ, ಲೈಂಗಿಕ ಅಲ್ಪಸಂಖ್ಯಾತರು, ವಿಶೇಷ ಚೇತನ ಮತದಾರರ ನೋಂದಣಿ ಹೆಚ್ಚಳ ಸೇರಿದಂತೆ ಅವರು ಚುನಾವಣೆಯಲ್ಲಿ ನಿರ್ವಹಿಸಿದ ಕಾರ್ಯಗಳ ಮೂಲಕ ರಾಷ್ಟ್ರಮಟ್ಟದಲ್ಲಿ ಅತ್ಯುತ್ತಮರಾಗಿ ಗುರುತಿಸಿಕೊಂಡಿದ್ದನ್ನು ಆಯೋಗ ಪ್ರಶಸ್ತಿಗೆ ಪರಿಗಣಿಸಿದೆ.

ಶಿಖಾ ಸಿ. ಅವರು ಕಳೆದ 2023 ರ ಸಾಲಿನಲ್ಲಿ ನಡೆದ ರಾಜ್ಯ ವಿಧಾನಸಭಾ ಚುನಾವಣಾ ಸಂದರ್ಭದಲ್ಲಿ ವಾಣಿಜ್ಯ ತೆರಿಗೆ ಆಯುಕ್ತರಾಗಿ ಇಲಾಖೆಯ ಮೂಲಕ ಮತದಾರರಲ್ಲಿ ಉಚಿತ ಉಡುಗೊರೆಗಳ ಕುರಿತು ಹಮ್ಮಿಕೊಂಡಿದ್ದ ಜನಜಾಗೃತಿ, ವಾಣಿಜ್ಯ ಕ್ಷೇತ್ರದಲ್ಲಿ ಚುನಾವಣಾ ನೀತಿ ಸಂಹಿತಿ ಪಾಲನೆ ಸೇರಿದಂತೆ ಕಟ್ಟುನಿಟ್ಟಿನ ಚುನಾವಣೆ ನಡೆಸಲು ಪ್ರಮುಖ ಪಾತ್ರವಹಿಸಿದ್ದಕ್ಕಾಗಿ ಆಯೋಗ ಅವರನ್ನು ಹಾಗೂ ಇಲಾಖೆಯನ್ನು ಈ ಪ್ರಶಸ್ತಿಗೆ ಪರಿಗಣಿಸಿದೆ.

ಆಯೋಗವು ಚುನಾವಣೆಗಳಲ್ಲಿ ಕಾರ್ಯನಿರ್ವಹಿಸಿದ ಅಧಿಕಾರಿಗಳನ್ನು ಪ್ರೋತ್ಸಾಹಿಸಲು ಹಾಗೂ ಅವರನ್ನು ಅಭಿನಂದಿಸಲು ಪ್ರತಿ ವರ್ಷ ಸಾಮಾನ್ಯ ವರ್ಗ, ವಿಶೇಷ ವರ್ಗ, ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿದ ಸರ್ಕಾರಿ ಇಲಾಖೆ ಅಥವಾ ಸಂಸ್ಥೆಗಳು ಹಾಗೂ ಅತ್ಯುತ್ತಮವಾಗಿ ಕಾರ್ಯ ನಿರ್ವಹಿಸಿದ ರಾಜ್ಯ ಎಂದು ನಾಲ್ಕು ವಿಭಾಗಗಳಲ್ಲಿ ಪ್ರಶಸ್ತಿಗಳನ್ನು ನೀಡಿ ಗೌರವಿಸುತ್ತದೆ.

ಭಾರತ ಚುನಾವಣಾ ಆಯೋಗ ಪ್ರತಿ ವರ್ಷ ನವದೆಹಲಿಯಲ್ಲಿ ಜನವರಿ 25 ರಂದು ಹಮ್ಮಿಕೊಳ್ಳುವ ರಾಷ್ಟ್ರೀಯ ಮತದಾರರ ದಿನಾಚರಣೆಯ ಕಾರ್ಯಕ್ರಮದಲ್ಲಿ ಪ್ರಶಸ್ತಿಗಳನ್ನು ಪ್ರಧಾನ ಮಾಡಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

> ಭಾರತ ಚುನಾವಣಾ ಆಯೋಗವು ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯಕ್ರಮದಡಿ ಉತ್ತಮ ಸೇವೆಯನ್ನು ಪರಿಗಣಿಸಿ ಪ್ರಶಸ್ತಿಗೆ ಆಯ್ಕೆ ಮಾಡಿರುವುದು ಸಂತಸ ತಂದಿದೆ. ಈ ರೀತಿಯ ಪ್ರಶಸ್ತಿಗಳು ನಮ್ಮ ಜವಾಬ್ದಾರಿಯನ್ನು ಇನ್ನಷ್ಟು ಹೆಚ್ಚು ಮಾಡುವುದಲ್ಲದೆ, ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಗಟ್ಟಿಗೊಳಿಸುವ ನಿಟ್ಟಿನಲ್ಲಿ ಮತ್ತಷ್ಟು ದಕ್ಷತೆಯಿಂದ ಉತ್ತಮವಾಗಿ ಕಾರ್ಯ ನಿರ್ವಹಿಸಲು ಉತ್ತೇಜನ ನೀಡುತ್ತದೆ
>
> » **ದಿವ್ಯಪ್ರಭುಚಿತ್ರದುರ್ಗ ಜಿಲ್ಲಾಧಿಕಾರಿ**

## ಫಾಸ್ಟ್ ನ್ಯೂಸ್

### ಸಾಯಿನಾಥ್ ವಿಗ್ರಹ ಪ್ರತಿಷ್ಠಾಪನೆ



» **ಹಿರಿಯೂರು**

ಹಿರಿಯೂರು ನಗರದ ನೃಪತುಂಗ ಬಡಾವಣೆಯಲ್ಲಿ ಬುಧವಾರ ಬೆಳಗ್ಗೆ ಶ್ರೀ ಸಾಯಿನಾಥ ಮಹಾರಾಜ್ ದುನಿ ವಿಗ್ರಹ ಪ್ರತಿಷ್ಠಾಪನೆಯನ್ನು ಟ್ರಸ್ಟ್ ಸಂಸ್ಥಾಪಕರಾದ ಕರುಣಾನಿಧಿ ಅವರ ನೇತೃತ್ವದಲ್ಲಿ ನೆರವೇರಿಸಲಾಯಿತು. ವಿವಿಧ ಪೂಜಾ ಕಾರ್ಯಕ್ರಮಗಳು ಜರುಗಿದವು. ಈ ಸಂದರ್ಭದಲ್ಲಿ ಟ್ರಸ್ಟ್ ಸಂಸ್ಥಾಪಕರಾದ ಕರುಣಾನಿಧಿ ಭುವನೇಶ್ವರಿ ಹಾಗೂ ಸಿದ್ಧರಾಮಣ್ಣ ಸರೋಜಮ್ಮ ಮೀನಾಕ್ಷಿ ಆಲೂರು ತಿಪ್ಪೇಸ್ವಾಮಿ ವಕೀಲರಾದ ಪಾಂಡುರಂಗಪ್ಪ ಎಸ್ ಮಂಜುನಾಥ ಶಿವಾನಂದ ನಾಗೇಶ್ ಹಾಗೂ ನಗರದ ಅನೇಕ ಭಕ್ತರು ಪಾಲ್ಗೊಂಡಿದ್ದರು

### ಚಳ್ಳಕೆರೆ ಜಿಟಿಟಿಸಿ: ಅತಿಥಿ ಉಪನ್ಯಾಸಕರ ಹುದ್ದೆಗೆ ಅರ್ಜಿ ಆಹ್ವಾನ

■ **ಚಿತ್ರದುರ್ಗ**

ಚಳ್ಳಕೆರೆ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದಲ್ಲಿ (ಜಿಟಿಟಿಸಿ) ಡಿಪ್ಲೋಮಾ ಇನ್ ಟೂಲ್ ಮತ್ತು ಡೈ ಮೇಕಿಂಗ್, ಡಿಪ್ಲೋಮಾ ಇನ್ ಮೆಕಾಟ್ರಾನಿಕ್ಸ್ ವಿಭಾಗದಲ್ಲಿ ಖಾಲಿ ಇರುವ ಅತಿಥಿ ಉಪನ್ಯಾಸಕರ ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ. ಜನವರಿ 24 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಬೋಧನೆಯಲ್ಲಿ ಕನಿಷ್ಟ ಒಂದು ವರ್ಷ ಅನುಭವವುಳ್ಳ ಪ್ರಥಮ ದರ್ಜೆಯಲ್ಲಿ ಬಿ.ಇ ಅಥವಾ ಎಂ.ಟೆಕ್ ಇನ್ ಮೆಕ್ಯಾನಿಕಲ್ ಅಥವಾ ಎಲೆಕ್ಟ್ರಾನಿಕ್ಸ್ ಅಂಡ್ ಕಮ್ಯುನಿಕೇಷನ್ ಇಂಜಿನಿಯರಿಂಗ್ ವಿಭಾಗದ ಪದವಿ ಹೊಂದಿರುವ ಆಸಕ್ತ ಅಭ್ಯರ್ಥಿಗಳು ಜನವರಿ 24ರೊಳಗಾಗಿ ಕಚೇರಿಗೆ ಅರ್ಜಿ ಸಲ್ಲಿಸಬಹುದು. ಮಾಸಿಕ ಗೌರವಧನ ರೂ.18,000/– ದಿಂದ 25,500/– ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಪ್ರಾಂಶುಪಾಲರು, ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರಮ ಸರ್ವೇ ನಂ.117, ಶಾರದಾ ಗಣಪತಿ ಕೋಲ್ಡ್ ಸ್ಟೋರೇಜ್ ಹತ್ತಿರ, ಬಳ್ಳಾರಿ ರಸ್ತೆ, ಚಳ್ಳಕೆರೆ–577522 ಹಾಗೂ ದೂರವಾಣಿ ಸಂಖ್ಯೆ 7625008641, 7019066755 ಗೆ ಸಂಪರ್ಕಿಸಬಹುದು ಎಂದು ಪ್ರಾಂಶುಪಾಲರು ತಿಳಿಸಿದ್ದಾರೆ.

### ತರಬೇತಿ ಕಾರ್ಯಾಗಾರ

■ **ಚಿತ್ರದುರ್ಗ**


ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಇದೇ ಜನವರಿ 18 ಮತ್ತು 19ರಂದು ಬೆಳಿಗ್ಗೆ 9 ರಿಂದ ಸಂಜೆ 5 ರವರೆಗೆ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ “ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ ಹಾಗೂ ನಿಯಮಗಳ ಅನುಷ್ಠಾನದಲ್ಲಿ ಭಾಗಿದಾರ ಇಲಾಖೆಗಳ ಪಾತ್ರ” ಕುರಿತಂತೆ ಎರಡು ದಿನಗಳ ಪುನಶ್ಚೇತನ ತರಬೇತಿ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರು ತಿಳಿಸಿದ್ದಾರೆ.

# ಮಿನಿ ಲಾರಿ ಮಾಲೀಕರ, ಚಾಲಕರ ಸಂಘ ಪ್ರತಿಭಟನೆ

» **ಚಿತ್ರದುರ್ಗ**

ಭಾರತೀಯ ನ್ಯಾಯ ಸಂಹಿತೆಯ ಸೆಕ್ಷನ್ 106(1) ಮತ್ತು (2) ಕಾಯ್ದೆ ಅನ್ವಯ 10 ವರ್ಷ ಜೈಲು 7 ಲಕ್ಷ ದಂಡದ ಕಾನೂನನ್ನು ಹಿಂಪಡೆಯುವಂತೆ ಆಗ್ರಹಿಸಿ ಚಿತ್ರದುರ್ಗ ಜಿಲ್ಲಾ ಮಿನಿ ಲಾರಿ ಮಾಲೀಕರ ಮತ್ತು ಚಾಲಕರ ಸಂಘ ನಗರದಲ್ಲಿ ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿಗಳ ಮುಖಾಂತರ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಗೆ ಮನವಿ ಸಲ್ಲಿಸಿತು.

ದೇಶದ ಗೃಹಸಚಿವರಾದ ಅಮಿತ್ ಶಾ ರವರು ಇತ್ತೀಚೆಗೆ ತಂದಿರುವ ಭಾರತೀಯ ನ್ಯಾಯ ಸಂಹಿತೆಯ ಸೆಕ್ಷನ್ 106(1) ಮತ್ತು (2) ಕಾಯ್ದೆ ಅನ್ವಯ, 10 ವರ್ಷ ಜೈಲು, 7 ಲಕ್ಷ ದಂಡ ವಿಧಿಸುವ ಕಾನೂನು ಎಲ್ಲಾ ಮಾಲೀಕರು ಮತ್ತು ಚಾಲಕರಿಗೆ ಅಸಮಾಧಾನ ತಂದಿದೆ. ಈ ಹಿಂದೆ ಭಾರತೀಯ ನ್ಯಾಯ ಸಂಹಿತೆ ಸೆಕ್ಷನ್ 106(1) ಹಿಟ್ ಅಂಡ್ ರನ್ ಕೇಸ್ ಗೆ 2 ವರ್ಷ ಜೈಲು ಶಿಕ್ಷೆಯನ್ನು ಇದೀಗ ಹೊಸ ಭಾರತೀಯ ನ್ಯಾಯ



ಸಂಹಿತೆ 106(2) ನಲ್ಲಿ ಮುಂದುವರೆಸಿ 10 ವರ್ಷ ಜೈಲು ಶಿಕ್ಷೆ ಮತ್ತು 7 ಲಕ್ಷ ದಂಡವನ್ನು ವಿಧಿಸುತ್ತದೆ ಎಂಬ ಕಾನೂನು ಇದು ಅತ್ಯಂತ ಅಮಾನವೀಯ ಹಾಗೂ ಚಾಲಕರ ಮೇಲೆ ಶೋಷಣೀಯಕರವಾಗಿರುತ್ತದೆ ಎಂದು ಚಿತ್ರದುರ್ಗ ಜಿಲ್ಲಾ ಮಿನಿ ಲಾರಿ ಮಾಲೀಕರು ಹಾಗೂ ಚಾಲಕರ ಸಂಘ ತಿಳಿಸಿದೆ.


ಪುಟ ↘ 2


# ಶಾಸಕ ಗೋವಿಂದಪ್ಪಮೇಲೆ ಕ್ರಿಮಿನಲ್ ಕೇಸ್ ಹಾಕಬೇಕು

### ಬಿಜೆಪಿ ಮುಖಂಡ ಎಸ್.ಲಿಂಗಮೂರ್ತಿ ಒತ್ತಾಯ

» **ಹೊಸದುರ್ಗ**

ಶಾಸಕ ಗೋವಿಂದಪ್ಪನವರ ಹೇಳಿಕೆ ತಾಲ್ಲೂಕಿನ ಜನರಲ್ಲಿ ಆತಂಕ ಹುಟ್ಟಿಸಿದೆ. ಇವರು ಮಾಜಿ ಶಾಸಕರಾಗಿದ್ದ ಸಂದರ್ಭದಲ್ಲಿ ನಾನೇ 50 ಲಕ್ಷ ರೂ.ಲಂಚವನ್ನು ಕೊಡಿಸಿದ್ದೇನೆಂದು ಹೇಳಿದ್ದಾರೆ. ಕಾನೂನಿನಲ್ಲಿ ಲಂಚವನ್ನು ಪಡೆಯುವುದು ಎಂತಹ ಅಪರಾಧವೋ, ಲಂಚವನ್ನು ನೀಡುವುದು ದೊಡ್ಡ ಅಪರಾಧ. ಇವರ ಹೇಳಿಕೆ ನೋಡಿದರೆ, ಇವರ ಮೇಲೆ ಕ್ರಿಮಿನಲ್ ಮೊಕದ್ದಮೆ ಹಾಕಬೇಕಾದ ಸಂದರ್ಭ ಸೃಷ್ಟಿಯಾಗಿದ್ದು, ಸರ್ಕಾರ ಕೇಸ್ ದಾಖಲಿಸಬೇಕೆಂದು ಕರ್ನಾಟಕ ರಾಜ್ಯ ಖನಿಜ ನಿಗಮದ ಮಾಜಿ ಅಧ್ಯಕ್ಷ, ಬಿಜೆಪಿ ಮುಖಂಡ ಎಸ್. ಲಿಂಗಮೂರ್ತಿ ಒತ್ತಾಯಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಬುಧವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಗೋವಿಂದಪ್ಪನವರು ಒಬ್ಬ ಜನಪ್ರತಿನಿಧಿಯಾಗಿದ್ದು, ಲಂಚವನ್ನು ನೀಡಿದ್ದೇನೆ ಎಂಬ ಹೇಳಿಕೆ ನೀಡಿರುವುದು ದೊಡ್ಡ ಅಪರಾಧವೇ ಆಗಿದೆ. ಇದಕ್ಕೆ ಸರಿಯಾದ ಉತ್ತರವನ್ನು ಜನರಿಗೆ, ಶಾಸಕರು ನೀಡಬೇಕು.


ಪುಟ ↘ 2


## ಪ್ರಮುಖ ಸುದ್ದಿ

### ಗ್ರಾಮೀಣ ಭಾಗದ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರಗಳ ಮೇಲ್ವಿಚಾರಕರಿಗೆ ತರಬೇತಿ ಕಾರ್ಯಾಗಾರ

# ಕಲಿಕೆಗೆ ಗ್ರಂಥಾಲಯಗಳು ಸಹಕಾರಿ: ಜಿ.ಪಂ ಸಿಇಓ

» **ಚಿತ್ರದುರ್ಗ**

ಗ್ರಾಮಮಟ್ಟದಲ್ಲಿ ತೆರೆಯಲಾಗಿರುವ ಗ್ರಂಥಾಲಯಗಳು ಮಕ್ಕಳ ಕಲಿಕೆಗೆ ಸಹಕಾರಿ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಹೇಳಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಬುಧವಾರ ಗ್ರಾಮೀಣ ಭಾಗದ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರಗಳ ಮೇಲ್ವಿಚಾರಕರಿಗೆ ಏರ್ಪಡಿಸಲಾದ ಒಂದು ದಿನದ ತರಬೇತಿ ಕಾರ್ಯಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಕೋವಿಡ್ ಸಮಯದಲ್ಲಿ ಶಾಲಾ–ಕಾಲೇಜುಗಳು ಮುಚ್ಚಿದ್ದವು. ಆ ಸಂದರ್ಭದಲ್ಲಿ ವಿದ್ಯಾರ್ಥಿಗಳು ಸಾಕಷ್ಟು ಕಲಿಕಾ ಅಂತರ ಅನುಭವಿಸಿದ್ದರು.




ಉನ್ನತ ಶಿಕ್ಷಣ ಹಾಗೂ ವೃತ್ತಿ ಶಿಕ್ಷಣ ಪಡೆಯುತ್ತಿರುವ ಯುವ ವಿದ್ಯಾರ್ಥಿಗಳು ವೃತ್ತಿ ಮಾರ್ಗದರ್ಶನ ಕೊರತೆ ಎದುರಿಸಿದ್ದರು.

ಈ ಸಂದರ್ಭದಲ್ಲಿ ಸಮುದಾಯದ ಗ್ರಾಮ ಪಂಚಾಯತ್ ಗ್ರಂಥಾಲಯಗಳಲ್ಲಿ ಇವರೆಲ್ಲರಿಗೂ ಶೈಕ್ಷಣಿಕ ಸಂಪನ್ಮೂಲಗಳ ಬಳಕೆಗೆ ಅವಕಾಶ ಮಾಡಿಕೊಳ್ಳಲಾಗಿತ್ತು ಎಂದರು. ಈ ರೀತಿಯಾಗಿ ಗ್ರಾಮೀಣ ಗ್ರಂಥಾಲಯಗಳನ್ನು ಕಲಿಕಾ ಕೇಂದ್ರಗಳನ್ನಾಗಿ ಪರಿವರ್ತಿಸಲಾಗಿತ್ತು. ಇದೇ ಮಾದರಿಯಲ್ಲಿ ಇಂಡಿಯಾ ಲಿಟರಸಿ ಪ್ರಾಜೆಕ್ಟ್ ಹಾಗೂ ಡೆಲ್ ಟೆಕ್ನಾಲಜಿ ಹಾಗೂ ಪಂಚಾಯತ್ ರಾಜ್ ಇಲಾಖೆಯ ಸಹಭಾಗಿತ್ವದಲ್ಲಿ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಹಾಗೂ ಯುವಕರಿಗೆ ವೃತ್ತಿ ಮಾರ್ಗದರ್ಶನದ ಬಗ್ಗೆ ಅರಿವು ಮೂಡಿಸಲು ಈ ಕಾರ್ಯಗಾರವನ್ನು ಏರ್ಪಡಿಸಲಾಗಿದೆ ಎಂದು ತಿಳಿಸಿದರು.

ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಹಾಗೂ ಯುವಕರಿಗೆ ವೃತ್ತಿ ಮಾರ್ಗದರ್ಶನ ಹಾಗೂ ಉನ್ನತ ವ್ಯಾಸಂಗದ ಬಗ್ಗೆ ಹೆಚ್ಚಿನ ಮಾಹಿತಿಯನ್ನು ಪಡೆಯಲು ಸಂಪನ್ಮೂಲಗಳನ್ನು ಗ್ರಾಮ ಪಂಚಾಯತಿಗಳಲ್ಲಿ ಒದಗಿಸಲಾಗಿದೆ. ಈ ನಿಟ್ಟಿನಲ್ಲಿ ಮಾಡಲಿಂಗ್, ಜಾಹೀರಾತು, ಕೃಷಿ ಮತ್ತು ತೋಟಗಾರಿಕ, ವಿಜ್ಞಾನ, ವಾಸ್ತುಶಿಲ್ಪಿ ಹಣಕಾಸು, ಕಾಲ್ ಸೆಂಟರ್ ಏಜೆಂಟ್, ನಾಗರೀಕಸೇವೆ, ಆಹಾರ ತಜ್ಞರು, ಪರಿಸರ ತಜ್ಞರು, ಮಾರಾಟ, ಛಾಯಾಗ್ರಾಹಕರು, ವಸ್ತು ಸಂಗ್ರಾಲಯ ತಜ್ಞರು, ಶಿಕ್ಷಕರು, ಪತ್ರಿಕೋದ್ಯಮಿ, ಹೋಟೆಲ್ ನಿರ್ವಾಹಕರು ಹಾಗೂ ವಿನ್ಯಾಸಕಾರರು ಇನ್ನು ಮುಂತಾದ ವೃತ್ತಿಗಳ ಬಗ್ಗೆ ತರಬೇತಿಯಲ್ಲಿ ಗ್ರಾಮೀಣ ಗ್ರಂಥಪಾಲಕರಿಗೆ ತರಬೇತಿ ನೀಡಲಾಗುವುದು. ಎಲ್ಲಾ ಗ್ರಂಥಪಾಲಕರು ತರಬೇತಿಯಲ್ಲಿ ಆಸಕ್ತಿಯಿಂದ ಪಾಲ್ಗೊಳ್ಳಬೇಕು. ಮಕ್ಕಳನ್ನು ಆಕರ್ಷಿಸಿ ಗ್ರಂಥಾಲಯಗಳಿಗೆ ಬರುವವರ ಸಂಖ್ಯೆ ಜಾಸ್ತಿ ಮಾಡುವ ಹೊಣೆ ಗ್ರಂಥಪಾಲಕರ ಮೇಲಿದೆ ಎಂದು ಜಿ.ಪಂ ಸಿಇಓ ಎಸ್.ಜೆ.ಸೋಮಶೇಖರ್ ಹೇಳಿದರು.





## ಫಾಸ್ಟ್ ನ್ಯೂಸ್

### ಕಲಿಕೆಗೆ ಗ್ರಂಥಾಲಯಗಳು ಸಹಕಾರಿ: ಜಿ.ಪಂ ಸಿಇಒ

» ಮೊದಲ ಪುಟದಿಂದ

ಈ ಸಂದರ್ಭದಲ್ಲಿ "ಕರಿಯರ್ ಪ್ಲಾನರ್" ಕನ್ನಡ ಆವೃತ್ತಿ ಪುಸ್ತಕವನ್ನು ಬಿಡುಗಡೆಗೊಳಿಸಿದರು. ಜಿ.ಪಂ ಉಪ ಕಾರ್ಯದರ್ಶಿ ಕೆ.ತಿಮ್ಮಪ್ಪ, ಮುಖ್ಯ ಗ್ರಂಥಾಲಯ ಅಧಿಕಾರಿಗಳು ಹಾಗೂ ನೋಡಲ್ ಅಧಿಕಾರಿ ಪಿ. ಆರ್.ತಿಪ್ಪೇಸ್ವಾಮಿ, ಮುಖ್ಯ ಗ್ರಂಥಾಲಯ ಅಧಿಕಾರಿ ಸುಮ ಕೋಡಿಹಳ್ಳಿ, ಇಂಡಿಯಾ ಲಿಟರಸಿ ಪ್ರಾಜೆಕ್ಟ್ ಮ್ಯಾನೇಜರ್ ರೋಹಿಣಿ, ತಾಂತ್ರಿಕ ಸಂಯೋಜಕ ಅವಿನಾಶ್ ಹಾಗೂ ಶಿಬಿರಾರ್ಥಿಗಳು ಇದ್ದರು.

### ಸಹಕಾರ ಚುನಾವಣೆ: ಉಸ್ತುವಾರಿಗಳ ನೇಮಕ

» ದಾವಣಗೆರೆ

ಜಿಲ್ಲಾ ಸಹಕಾರ ಬ್ಯಾಂಕ್ ನಿ. ಆಡಳಿತ ಮಂಡಳಿ ನಿರ್ದೇಶಕರ ಚುನಾವಣೆ ಹಿನ್ನೆಲೆ ಚನ್ನಗಿರಿ ವಿಧಾನಸಭಾ ಕ್ಷೇತ್ರಕ್ಕೆ ಚುನಾವಣೆ ಉಸ್ತುವಾರಿಗಳನ್ನಾಗಿ ಶಾಸಕರಾದ ಬಸವರಾಜು ವಿ ಶಿವಗಂಗಾ ಅವರು ನೇಮಕ ಮಾಡಿದ್ದಾರೆ. ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡರಾದ ಹಿರೇಕೋಗಲೂರು ಗ್ರಾಮದ ಶಿವಕುಮಾರ್ ಮತ್ತು ನಲ್ಲುದರೆ ಗ್ರಾಮದ ವಿಜಿ ಗೌಡ್ರು ಈ ಇಬ್ಬರನ್ನು ಚುನಾವಣೆ ಉಸ್ತುವಾರಿಗಳನ್ನಾಗಿ ನೇಮಕ ಮಾಡಿದ್ದಾರೆ. ಜಿಲ್ಲಾ ಸಹಕಾರ ಬ್ಯಾಂಕ್ ನಿ. ಆಡಳಿತ ಮಂಡಳಿ ನಿರ್ದೇಶಕರ ಚುನಾವಣೆ ಹಿನ್ನೆಲೆ ಸ್ಪರ್ಧೆ ಮಾಡಿದ ಬೆಂಬಲಿತ ಅಭ್ಯರ್ಥಿಗಳನ್ನ ಗೆಲ್ಲಿಸಲು ಕಾಂಗ್ರೆಸ್ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರ ಸಹಕಾರದೊಂದಿಗೆ ಶ್ರಮಿಸಬೇಕೆಂದು ಶಾಸಕರು ಸೂಚಿಸಿದ್ದಾರೆ.

### ಮಿನಿ ಲಾರಿ ಮಾಲೀಕರ, ಚಾಲಕರ ಸಂಘ ಪ್ರತಿಭಟನೆ

» ಮೊದಲ ಪುಟದಿಂದ

ಮಾಲೀಕರು ಹಾಗೂ ಚಾಲಕರ ಹಿತದೃಷ್ಟಿ ಮತ್ತು ಮಾನವೀಯತೆಯ ಮೇರೆಗೆ ಈ ಪ್ರಸ್ತುತ ಲಾಗೂ ಮಾಡಿರುವ ಭಾರತೀಯ ನ್ಯಾಯ ಸಂಹಿತೆಯ ಸೆಕ್ಷನ್ 106(1) ಮತ್ತು (2) ಕಾಯ್ದೆ ಅನ್ವಯ, 10 ವರ್ಷ ಜೈಲು, 7 ಲಕ್ಷ ದಂಡ ವಿಧಿಸುವ ಕಾನೂನನ್ನು ದಯಮಾಡಿ ಹಿಂಪಡೆಯಬೇಕೆಂದು ಆಗ್ರಹಿಸಿದರು.ನಗರದ ಯೂನಿಯನ್ ಪಾರ್ಕ್‌ನಿಂದ ಗಾಂಧಿವೃತ್ತದ ಮೂಲಕ ಮುಖ್ಯ ಬಿ.ಡಿ. ರಸ್ತೆಯಿಂದ ಜಿಲ್ಲಾಧಿಕಾರಿಗಳ ಕಚೇರಿವರಿಗೆ ಸುಮಾರು 200 ರಿಂದ 300 ಜನ ಪ್ರತಿಭಟನೆಯನ್ನು ನಡೆಸಿ ಮನವಿಯನ್ನು ಸಲ್ಲಿಸಲಾಯಿತು.ಪ್ರತಿಭಟನೆಯ ನೇತೃತ್ವವನ್ನು ಚಿತ್ರದುರ್ಗ ಜಿಲ್ಲಾ ಲಾರಿ ಮಾಲೀಕರು ಹಾಗೂ ಚಾಲಕರ ಸಂಘದ ಅಧ್ಯಕ್ಷರಾದ ಬಿ.ಪ್ರಭು ಪ್ರಧಾನ ಕಾರ್ಯದರ್ಶಿ ಕೆ.ನಾಗರಾಜು ವಹಿಸಿದ್ದರು.

### ಬರಗಾಲ ಘೋಷಿಸಿದರೂ ರೈತರಿಗೆ ಪರಿಹಾರವಿಲ್ಲ - ಸುಂದರಗೌಡ

» ಚಿಕ್ಕಮಗಳೂರು

ಜಿಲ್ಲೆಯನ್ನು ಬರಪೀಡಿತ ಪ್ರದೇಶವೆಂದು ಘೋಷಿಸಿದರೂ ರಾಜ್ಯ ಸರ್ಕಾರ ಯಾವುದೇ ಪರಿಹಾರ ಒದಗಿಸದೇ ರೈತರ ಬದುಕಿನಲ್ಲಿ ಚೆಲ್ಲಾಟವಾಡುತ್ತಿದೆ ಎಂದು ಜಿಲ್ಲಾ ಆಮ್‌ಆದ್ಮಿ ಮಾಧ್ಯಮ ಪ್ರತಿನಿಧಿ ಡಾ. ಕೆ.ಸುಂದರಗೌಡ ಅಸಮಾಧಾನ ವ್ಯಕ್ತಪಡಿಸಿದರು. ಈ ಕುರಿತು ಹೇಳಿಕೆಯಲ್ಲಿ ತಿಳಿಸಿರುವ ಅವರು ಜಿಲ್ಲೆಯನ್ನು ಸಂಪೂರ್ಣ ಬರಗಾರವೆಂದು ಘೋಷಿಸಿದ್ದರೂ ಪರಿಹಾರವಿಲ್ಲ. ಮೇವಿಲ್ಲದೇ ಗೋವುಗಳನ್ನು ಸಾಕಾಲಾಗದೇ ಪರಿಸ್ಥಿತಿ ಎದುರಾಗಿದೆ. ಅಲ್ಲದೇ ರೈತರು ಸಂಕಷ್ಟಕ್ಕೆ ಸಿಲುಕಿ ಬೆಳೆಪರಿಹಾರವಿಲ್ಲ. ಬೆಳೆಯು ದೊರಕದೇ ಕಂಗಾಲಾಗಿದ್ದಾರೆ ಎಂದು ತಿಳಿಸಿದ್ದಾರೆ.

### ಅರ್ಜಿ ಆಹ್ವಾನ

■ ಹೊಸಪೇಟೆ

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ 2023–24ನೇ ಸಾಲಿನ ವಿಕಲಚೇತನರ ದೈಹಿಕ ವಿಕಲಚೇತನರಿಗಾಗಿ ಅನುಷ್ಠಾನಗೊಳಿಸುತ್ತಿರುವ ವೀಲ್ ಚೇರ್ ಯೋಜನೆಯಡಿ ಬ್ಯಾಟರಿ ಚಾಲಿತ ವೀಲ್‌ಚೇರ್‌ಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ದೈಹಿಕ ವಿಕಲಚೇತನರು ತಮ್ಮ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿರುವ ವಿ.ಆರ್. ಡಬ್ಲ್ಯೂ, ನಗರ ಸಭೆ, ಪುರಸಭೆ, ಪಟ್ಟಣ ಪಂಚಾಯಿತಿಯಲ್ಲಿನ ಯು.ಆರ್.ಡಬ್ಲ್ಯೂ ಹಾಗೂ ತಾಲೂಕು ಪಂಚಾಯಿತಿಯಲ್ಲಿರುವ ಎಂ.ಆರ್. ಡಬ್ಲ್ಯೂಗಳಲ್ಲಿ ನಿಗದಿತ ಅರ್ಜಿ ನಮೂನೆಯಲ್ಲಿ ಭರ್ತಿ ಮಾಡಿ ಜನವರಿ 30ರೊಳಗಾಗಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಕಚೇರಿ,ತಾಲೂಕುಪಂಚಾಯಿತಿ ಆವರಣ, ಸಂಡೂರು ರಸ್ತೆ, ಹೊಸಪೇಟೆ ಹಾಗೂ ವಿಜಯನಗರ ಜಿಲ್ಲೆಯ ತಾಲೂಕು ಪಂಚಾಯಿತಿ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಂ.ಆರ್.ಡಬ್ಲ್ಯೂಗಳಾದ ಹೊಸಪೇಟೆ ಮೊ.ಸಂ: 9945252991, ಹಗರಿಬೊಮ್ಮನಹಳ್ಳಿ ಮೊ.ಸಂ: 9741185924, ಕೂಡ್ಲಿಗಿ ಮೊ.ಸಂ: 8217626361, ಹಡಗಲಿ ಮೊ.ಸಂ: 9900890403, ಕೊಟ್ಟೂರು ಮೊ.ಸಂ: 7353974518, ಹರಪನಹಳ್ಳಿ ಮೊ.ಸಂ: 9901182525, ಇವರಿಗೆ ಸಂಪರ್ಕಿಸಬಹುದಾಗಿದೆ ಎಂದುಜಿಲ್ಲಾಅಂಗವಿಕಲರಕಲ್ಯಾಣಾಧಿಕಾರಿಗಳಾದ ಅವಿನಾಶಲಿಂಗ ಎಸ್.ಗೋಟಖಿಂಡಿ ತಿಳಿಸಿದ್ದಾರೆ.

---

ರಾಷ್ಟ್ರೀಯ ರಸ್ತೆ ಸುರಕ್ಷತಾ ಸಪ್ತಾಹ – ರಸ್ತೆ ಸುರಕ್ಷತೆ–ಜೀವನ ಸುರಕ್ಷತೆ ಭಿತ್ತಿಪತ್ರ ಬಿಡುಗಡೆ

# ಸಂಚಾರಿ ನಿಯಮ ಪಾಲಿಸಿ; ಅಪಘಾತ ಕಡಿಮೆಗೊಳಿಸಿ

» ಚಿತ್ರದುರ್ಗ

ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ, ಚಿತ್ರದುರ್ಗ ಪ್ರಾದೇಶಿಕ ಸಾರಿಗೆ ಕಚೇರಿ ಹಾಗೂ ವಿವಿಧ ಇಲಾಖೆಗಳ ಸಹಯೋಗದಲ್ಲಿ ಜ.23 ರವರೆಗೆ ರಾಷ್ಟ್ರೀಯ ರಸ್ತೆ ಸುರಕ್ಷತಾ ಸಪ್ತಾಯವನ್ನು ಜಿಲ್ಲೆಯಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಹೇಳಿದರು.

ರಾಷ್ಟ್ರೀಯ ರಸ್ತೆ ಸುರಕ್ಷತಾ ಸಪ್ತಾಹ ಅಂಗವಾಗಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಜಾಗೃತಿ ಭಿತ್ತಿಪತ್ರಗಳನ್ನು ಬಿಡುಗಡೆ ಮಾಡಿದ ಅವರು, ಅಪಘಾತ ಸಂಖ್ಯೆಗಳನ್ನು ಕಡಿಮೆಗೊಳಿಸಿ, ಜನರ ಜೀವ ರಕ್ಷಿಸುವ ನಿಟ್ಟಿನಲ್ಲಿ ಜನರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಜ. 16 ರಿಂದ ಜ. 23 ರವರೆಗೆ ರಾಷ್ಟ್ರೀಯ ರಸ್ತೆ ಸುರಕ್ಷತಾ ಸಪ್ತಾಹ ಆಯೋಜಿಸಲಾಗಿದೆ.




ಸಾರ್ವಜನಿಕರು ಸಂಚಾರಿ ನಿಯಮಗಳನ್ನು ಪಾಲಿಸುವ ಮೂಲಕ ಹಾಗೂ ಸುರಕ್ಷತಾ ಕ್ರಮಗಳನ್ನು ಅನುಸರಿಸುವ ಮೂಲಕ ಅಪಘಾತಗಳನ್ನು ತಡೆಗಟ್ಟಬಹುದಾಗಿದೆ. ಸುರಕ್ಷತಾ ಸಪ್ತಾಹದ ಅಂಗವಾಗಿ ಜಿಲ್ಲೆಯಲ್ಲಿ ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು, ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ಪರಿಣಾಮಕಾರಿಯಾಗಿ ಕಾರ್ಯಕ್ರಮಗಳನ್ನು ಏರ್ಪಡಿಸುವಂತೆ ಸೂಚನೆ ನೀಡಿದರು.

ಪ್ರಾದೇಶಿಕ ಸಾರಿಗೆ ಅಧಿಕಾರಿ ಭರತ್ ಕಾಳೆ ಸಿಂಘೆ ಅವರು ರಾಷ್ಟ್ರೀಯ ರಸ್ತೆ ಸುರಕ್ಷತಾ ಸಪ್ತಾಹ ಕುರಿತು ಮಾಹಿತಿ ನೀಡಿ, ಸಪ್ತಾಹವನ್ನು ಪರಿಣಾಮಕಾರಿಯಾಗಿಸಲು ಹಾಗೂ ಸಾರ್ವಜನಿಕರಲ್ಲಿ ಸಂಚಾರಿ ನಿಯಮಗಳ ಬಗ್ಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ಚಾಲನಾ ತರಬೇತಿ ಶಾಲೆಯ ಸಿಬ್ಬಂದಿಗೆ ತರಬೇತಿ ನೀಡಲಾಗುವುದು, ಬೀದಿ ನಾಟಕಗಳ ಮೂಲಕ ಜನರಲ್ಲಿ ಜಾಗೃತಿ ಮೂಡಿಸಲಾಗುವುದು ಎಂದರು.

ಎಲ್ಲ ವರ್ಗದ ವಾಹನಗಳ ತಪಾಸಣೆಯನ್ನು ತೀವ್ರಗೊಳಿಸ 'ಲಾಗುವುದು, ಹೆಲ್ಮೆಟ್ ಧರಿಸುವುದು, ಸೀಟ್‌ಬೆಲ್ಟ್ ಧರಿಸಿ ವಾಹನ ಚಾಲನೆ, ರಸ್ತೆ ಪಥ ಶಿಸ್ತು ನಿರ್ವಹಣೆ ಕುರಿತು ಅರಿವು ಮೂಡಿಸಲಾಗುವುದು, ಶಾಲೆಗಳಲ್ಲಿ ರಸ್ತೆ ಸುರಕ್ಷತಾ ವಿಷಯ ಕುರಿತು ಪ್ರಬಂಧ ಸ್ಪರ್ಧೆ, ಚಿತ್ರ ಬಿಡಿಸುವ ಸ್ಪರ್ಧೆ ಏರ್ಪಡಿಸಲಾಗುವುದು, ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ರಸ್ತೆ ಸುರಕ್ಷತಾ ವಿಷಯ ಕುರಿತು ವಿಶೇಷ ಉಪನ್ಯಾಸ ಹಮ್ಮಿಕೊಳ್ಳಲಾಗುವುದು. ಸಾರ್ವಜನಿಕರು ಕೂಡ ಸಂಚಾರಿ ನಿಯಮಗಳನ್ನು ತಪ್ಪದೆ ಪಾಲಿಸುವ ಮೂಲಕ ರಸ್ತೆ ಅಪಘಾತಗಳನ್ನು ತಪ್ಪಿಸಲು ನೆರವಾಗಬೇಕು ಎಂದರು.

ಜಿ.ಪಂ. ಸಿಇಒ ಎಸ್.ಜೆ. ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ, ಜಿಲ್ಲಾ ವಾರ್ತಾಧಿಕಾರಿ ತುಕಾರಾಂರಾವ್, ಸಮಾಜಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಹರೀಶ್, ಪ್ರಾದೇಶಿಕ ಸಾರಿಗೆ ಇಲಾಖೆ ಕಚೇರಿ ಹಿರಿಯ ಮೋಟಾರು ವಾಹನ ನಿರೀಕ್ಷಕ ಪಿ.ಎಂ. ಶಾನಭಾಗ್, ಅಧೀಕ್ಷಕ ಹೇಮಂತ್ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

---

# 26 ರಿಂದ ಸಂವಿಧಾನ ಸ್ತಬ್ಧಚಿತ್ರ ಮೆರವಣಿಗೆ

» ದಾವಣಗೆರೆ

ದೇಶ ಸ್ವಾತಂತ್ರ್ಯವಾದ ನಂತರ 1950 ರ ಜನವರಿ 26 ರಿಂದ ಸಂವಿಧಾನ ಜಾರಿಯಾಗಿದ್ದು 2024 ರ ಜನವರಿ 26 ರಂದು ಅಮೃತ ಮಹೋತ್ಸವ ದಿನಾಚರಣೆ ಮಾಡಲಾಗುತ್ತಿದ್ದು ಸಂವಿಧಾನದ ಅಂಶಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಲು ಸರ್ಕಾರ ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮ ಆಯೋಜಿಸಲು ಉದ್ದೇಶಿಸಿದೆ ಎಂದು ಜಿಲ್ಲಾಧಿಕಾರಿ ಡಾ.ಎಂ.ವಿ.ವೆಂಕಟೇಶ್ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಏರ್ಪಡಿಸಿದ್ದ ಭಾರತದ ಸಂವಿಧಾನ ಜಾಗೃತಿ ಜಾಥಾದ ಸ್ತಬ್ಧಚಿತ್ರ ಕುರಿತ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಸಂವಿಧಾನದ ಬಗ್ಗೆ ಜಾಗೃತಿ ಮೂಡಿಸಲು ಜಿಲ್ಲೆಯ ಎಲ್ಲಾ 194 ಗ್ರಾಮ ಪಂಚಾಯಿತಿಗಳ ಕೇಂದ್ರಸ್ಥಾನ ಮತ್ತು 7 ನಗರ, ಸ್ಥಳೀಯ ಸಂಸ್ಥೆಗಳ ಕೇಂದ್ರ ಸ್ಥಾನದಲ್ಲಿ ಸಂವಿಧಾನ ಸ್ತಬ್ಧಚಿತ್ರದ ಮೆರವಣಿಗೆ ಮಾಡಲಾಗುತ್ತದೆ. ಜಿಲ್ಲೆಯಲ್ಲಿ 27 ದಿನಗಳ ಕಾಲ ಈ ಜಾಥಾ ನಡೆಯಲಿದೆ ಎಂದರು.




ಪ್ರತಿ ಗ್ರಾಮ ಪಂಚಾಯಿತಿ ಕೇಂದ್ರಸ್ಥಾನಕ್ಕೆ ಬರಲಿದ್ದು ಇಲ್ಲಿ ವಿವಿಧ ಕಾರ್ಯಕ್ರಮಗಳು, ಸಂವಿಧಾನ ಕುರಿತು ಉಪನ್ಯಾಸ, ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಸಮಾನತೆ ಕುರಿತಂತೆ ಸರ್ಕಾರ ಕೈಗೊಂಡಿರುವ ಯೋಜನೆಗಳ ಜಾಗೃತಿಯನ್ನು ಈ ವೇಳೆ ಮೂಡಿಸುವ ಮೂಲಕ ಸಂವಿಧಾನದ ಆಶಯಗಳ ಕುರಿತು ಜನಜಾಗೃತಿ ಮೂಡಿಸುವುದು ಈ ಸಂವಿಧಾನ ಜಾಥಾ ಉದ್ದೇಶವಾಗಿರುತ್ತದೆ.

ಗ್ರಾಮಗಳಿಗೆ ಜಾಥಾ ಆಗಮಿಸಿದಾಗ ಗ್ರಾಮ ಪಂಚಾಯಿತಿ ಮುಂದಾಳತ್ವದಲ್ಲಿ ಸ್ವಾಗತಿಸುವುದು ಮತ್ತುಮೆರವಣಿಗೆಏರ್ಪಡಿಸಿದವೇಳೆಸ್ಥಳೀಯಕಲಾ ತಂಡಗಳನ್ನು ಭಾಗವಹಿಸುವಂತೆ ನೋಡಿಕೊಂಡು ಕಾರ್ಯಕ್ರಮ ಯಶಸ್ವಿಗೊಳಿಸಲು ನಾಗರಿಕರು, ಸಂಘ, ಸಂಸ್ಥೆಯವರು ಭಾಗವಹಿಸುವಂತೆ ನೋಡಿಕೊಳ್ಳಲು ತಿಳಿಸಿದರು.

ಜಾಥಾವನ್ನು ಜನವರಿ 26 ರಂದು ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯುವ ಗಣರಾಜ್ಯೋತ್ಸವದ ವೇಳೆ ಜಿಲ್ಲಾ ಉಸ್ತುವಾರಿ ಸಚಿವರು ಉದ್ಘಾಟಿಸುವರು. ಎಲ್ಲಾ ಇಲಾಖೆ ಅಧಿಕಾರಿಗಳು, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಮತ್ತು ಪ್ರತಿ ಗ್ರಾಮ ಪಂಚಾಯಿತಿಗೆ ಒಬ್ಬರಂತೆ ನೋಡಲ್ ಅಧಿಕಾರಿಗಳನ್ನು ನೇಮಕ ಮಾಡುವ ಮೂಲಕ ಕಾರ್ಯಕ್ರಮ ಯಶಸ್ವಿಯಾಗಿ ನಿರ್ವಹಿಸಲು ಉಸ್ತುವಾರಿ ವಹಿಸಲಾಗುತ್ತದೆ ಎಂದರು.

ಸಭೆಯಲ್ಲಿ ಜಿ.ಪಂ.ಸಿಇಓ ಸುರೇಶ್ ಬಿ ಇಟ್ನಾಳ್, ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ನಾಗರಾಜ ಹಾಗೂ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

---

# ಶಾಸಕ ಗೋವಿಂದಪ್ಪಮೇಲೆ ಕ್ರಿಮಿನಲ್ ಕೇಸ್ ಹಾಕಬೇಕು



» ಮೊದಲ ಪುಟದಿಂದ

ಈ ಹಿಂದೆ ಇವರೇ ಶಾಸಕರಾಗಿದ್ದ ಅವಧಿಯಲ್ಲಿ ತಾಲೂಕಿನಲ್ಲಿ ಸಾಕಷ್ಟುಲಂಚಾವತಾರನಡೆದಿತ್ತು. ಮತ್ತೆ ಇದೀಗ, ತಾಲೂಕಿನ ಎಲ್ಲಾ ಇಲಾಖೆಗಳಲ್ಲಿ ಲಂಚದ ಮೂಲಕ ಜನರಿಗೆ ಕಿರುಕುಳವನ್ನು ಕೊಡಲಾಗುತ್ತಿದೆ. ಲಂಚ ಪಡೆದಿರುವ ಸಾಕ್ಷ್ಯಧಾರಗಳು ನನ್ನ ಬಳಿಯಿದ್ದು, ಜನರ ಮುಂದಿಡುವೆ ಎಂದು ಹೇಳಿದರು.

ನೀವು ಮಾಜಿ ಶಾಸಕರಾಗಿದ್ದ ಸಂದರ್ಭದಲ್ಲಿ'ನಾನುಬ್ಯಾಂಕಿನಲ್ಲಿ ಮಾರ್ಟಗೇಜ್ ಮಾಡಲು ಸಬ್ ರಿಜಿಸ್ಟರ್ ಕಚೇರಿಯಲ್ಲಿ ಒಂದು ಲಕ್ಷ ಹಣವನ್ನು ಲಂಚವಾಗಿ ಕೊಟ್ಟಿದ್ದೇನೆ ಎಂದು ಹೇಳಿಕೊಂಡಿದ್ದೀರಿ. ನೀವೇ ಒಬ್ಬ ಶಾಸಕರಾಗಿ ಈ ರೀತಿ ಹೇಳಿಕೆ ಕೊಡುತ್ತಿರುವುದನ್ನು ನೋಡಿ, ಕ್ಷೇತ್ರದ ಜನರು ಆತಂಕಕ್ಕೆ ಒಳಗಾಗಿದ್ದಾರೆ. ಅಧಿಕಾರದಲ್ಲಿರುವವರೇ ಈ ರೀತಿಯಾಗಿ ಲಂಚ ಕೊಟ್ಟರೆ, ಸಾಮಾನ್ಯ ಜನರ ಪಾಡೇನು? ಇವರು ಲಂಚಕ್ಕೆ ಯಾವ ರೀತಿಯಾಗಿ ಕಡಿವಾಣ ಹಾಕುತ್ತಾರೆಂಬ ದೊಡ್ಡ ಪ್ರಶ್ನೆ ಜನರಲ್ಲಿ ಮೂಡಿದೆ. ಇದಕ್ಕೆ ಏನು ಹೇಳುವಿರಿ ಎಂದು ಶಾಸಕರಿಗೆ ಪ್ರಶ್ನಿಸಿದ್ದಾರೆ. ಗೋವಿಂದಪ್ಪ ನವರಿಗೆ ಅಧಿಕಾರವಿದ್ದು, ಮಣ್ಣುಸಾಗಟ ಮತ್ತು ಅಕ್ರಮ ಮರಳುಸಾಗಟಕ್ಕೆ ಕಡಿವಾಣ ಹಾಕಬೇಕು. ನಾನು ಖನಿಜ ನಿಗಮದ ಅಧ್ಯಕ್ಷನಾಗಿದ್ದಾಗ ರೈತರು ಮನೆ ಕಟ್ಟಲೂ, ದೇವಸ್ಥಾನ ಕಟ್ಟಲು ಮರಳನ್ನ ಉಚಿತವಾಗಿ ಮತ್ತು ಕಡಿಮೆ ದರದಲ್ಲಿ ನೀಡಬೇಕೆಂದು ನೀತಿಯನ್ನು ರೂಪಿಸಲಾಗಿತ್ತು. ಅದು ಕೂಡ ಈಗಿನ ಸರ್ಕಾರದಲ್ಲಿ ಜಾರಿಗೆ ಬಂದಿಲ್ಲ. ಹಿಂದೆ ಕಂದಾಯ ಮತ್ತು ಪೊಲೀಸ್ ಇಲಾಖೆಯ ಆಡಳಿತ ವೈಫಲ್ಯದಿಂದ ಕಳ್ಳತನ ಮಾಡಿ ತಪ್ಪಿಸಿಕೊಂಡಿರುವವರು ಇದ್ದಾರೆ. ಆದರೆ, ಅಮಾಯಕರ ಮೇಲೆ ಕೇಸ್ ಹಾಕಲಾಗಿದೆ. ಜನರ ಕಣ್ಣೊರಿಸುವ ತಂತ್ರದಿಂದ ಕೆಲವೊಬ್ಬ ಮುಖಂಡರ ಮೇಲೆ ಆಗೊಂದು, ಇಗೊಂದು ಕೇಸ್ ವಾಪಸ್ ಹಾಕಲಾಗಿದೆ. ಶಾಸಕರು ಸುಮ್ಮನೆ ಜನರಿಗೆ ಮಂಕುಬೂದಿ ಎರಚುವುದನ್ನು ಬಿಟ್ಟು, ಉತ್ತಮ ಆಡಳಿತ ನಡೆಸಿ ಎಂದರು.

> ಈ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಯಾವುದೇ ಅಭಿವೃದ್ಧಿ ಕೆಲಸಗಳು ನಡೆಯುತ್ತಿಲ್ಲ. ಅಭಿವೃದ್ಧಿ ಮರೆತು, ಭಾಗ್ಯಗಳಿಗೆ ಹಣವನ್ನು ಹಾಕಲಾಗುತ್ತಿದೆ. ಜನರಿಗೆ ನೀಡುವ ಭಾಗ್ಯಗಳಿಗೆ ನಮ್ಮ ವಿರೋಧವಿಲ್ಲ. ಆದರೆ, ಇದನ್ನು ಮುಂದಿಟ್ಟುಕೊಂಡು ಕಣ್ಣೊರೆಸುವ ತಂತ್ರ ನಡೆಯುತ್ತಿದೆ. ಬಹಳಷ್ಟು ಕಡೆಗೆ ಭಾಗ್ಯಗಳಿಗೆ ತಲುಪುತ್ತಿಲ್ಲ.
> » ಏಸ್.ಲಿಂಗಮೂರ್ತಿ

---

# ಮಸ್ಕಲ್ ಸಾರ್ವಜನಿಕ ಆಸ್ಪತ್ರೆಯಲ್ಲಿ ನೇತ್ರ ತಪಾಸಣಾ ಶಿಬಿರ

» ಹಿರಿಯೂರು

ತಾಲೂಕಿನ ಮಸ್ಕಲ್ ಗ್ರಾಮ ಪಂಚಾಯತಿ ವ್ಯಾಪ್ತಿಯ ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವರು ಯೋಜನೆ ಹಾಗೂ ಸಾಂಕೀಕ ಖಾತೆಯ ಸಚಿವರಾದ ಡಿ ಸುಧಾಕರ್ ಅವರ ನೇತೃತ್ವದಲ್ಲಿ ಉಚಿತ ಕಣ್ಣಿನ ತಪಾಸಣಾ ಶಿಬಿರವನ್ನು ಏರ್ಪಡಿಸಲಾಗಿತ್ತು ಕಾರ್ಯಕ್ರಮವನ್ನು ಹಿರಿಯೂರು ತಾಲೂಕು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಖಾದಿ ರಮೇಶ್ ರವರು ಶಿಬಿರವನ್ನು ಉದ್ಘಾಟನೆ ಮಾಡಿದರು ಅಧ್ಯಕ್ಷತೆಯನ್ನು ಗ್ರಾಮ ಪಂಚಾಯತಿ ಅಧ್ಯಕ್ಷರಾದ ಕೊಲ್ಲಮ್ಮ ವಹಿಸಿದ್ದರು ಈ ಸಂದರ್ಭದಲ್ಲಿ ಮುಖಂಡರು ಮಾಜಿ ಕೆಪಿಸಿಸಿ ಸದಸ್ಯರಾದ ಕಂದಿಕೆರೆ ಸುರೇಶ್ ಬಾಬು ರವರು ಮಸ್ಕಲ್ ಪಂಚಾಯತ್ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಮಸ್ಕಲ್ ಶ್ರೀನಿವಾಸ್ ಗ್ರಾಮ ಪಂಚಾಯತಿ ಮಾಜಿ ಉಪಾಧ್ಯಕ್ಷರಾದ ವೈ ನಾಗರಾಜ್ ಪೆಪ್ಸಿ ನಾಗರಾಜ್ ನಗರಸಭಾ ಸದಸ್ಯರುಗಳಾದ ಶಿವಕುಮಾರ್ ಗಿರೀಶ್ ಹಾಗೂ ಮುಖಂಡರುಗಳಾದ ಪರಮೇಶ್ವರಪ್ಪ ಈರಣ್ಣ ಎನ್ ರವಿ ಕುಮಾರ್ ಆನಂದ್ ಕುಮಾರ್ ಪಿಎಚ್ ಧನಂಜಯ ಎಂ ಜಿ ಲಕ್ಷ್ಮಿ ರಮ್ಯಾನಿಜಲಿಂಗಪ್ಪ ತಿಪ್ಪೇಸ್ವಾಮಿ ಯು ರಾಜಣ್ಣ ಹಾಗೂ ಅನೇಕ ಮುಖಂಡರು ಪಾಲ್ಗೊಂಡಿದ್ದರು





---

## ಪ್ರಮುಖ ಸುದ್ದಿ

# ಪಕ್ಷದ ಕಾರ್ಯಕರ್ತರಿಗೆ ಅಧಿಕಾರ; ಮಯೂರ ಜಯಕುಮಾರ್

» ಚಿತ್ರದುರ್ಗ

ಪಕ್ಷದ ಕಾರ್ಯಕರ್ತರ ಶ್ರಮದಿಂದ ವಿಧಾನಸಭಾ ಚುನಾವಣೆಯಲ್ಲಿ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರವನ್ನು ಹಿಡಿಯುವಂತಾಯಿತು. ಪಕ್ಷದ ಗೆಲುವಿಗೆ ಕಾರಣರಾದ ಕಾರ್ಯಕರ್ತರಿಗೆ ಮನ್ನಣೆ ನೀಡುವುದು ನಮ್ಮ ಕರ್ತವ್ಯವಾಗಿದೆ ಎಂದು ಎಐಸಿಸಿ ಉಸ್ತುವಾರಿ ಮಯೂರ ಜಯಕುಮಾರ್ ಹೇಳಿದರು.ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಬುಧವಾರ ಜಿಲ್ಲಾ ಕಾಂಗ್ರೆಸ್ ಪದಾಧಿಕಾರಿಗಳ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಮಂಡಳಿ ಹಾಗೂ ನಿಗಮಗಳಲ್ಲಿ ವಿವಿಧ ಹುದ್ದೆಗಳಿಗೆ ಪಕ್ಷದ ಕಾರ್ಯಕರ್ತರನ್ನು ನೇಮಕ ಮಾಡಲಾಗುವುದು. ರಾಜ್ಯದಲ್ಲಿ ವಿಧಾನಸಭೆ ಚುನಾವಣೆ ನಡೆದಾಗ ಪಕ್ಷದ ಕಾರ್ಯಕರ್ತರು ಪಕ್ಷದ ಅಭ್ಯರ್ಥಿಗಳ ಗೆಲುವಿಗಾಗಿ ಶ್ರಮವನ್ನು ಹಾಕಿದ್ದಾರೆ. ಇದರ ಫಲವಾಗಿ ರಾಜ್ಯದಲ್ಲಿ ನಮ್ಮ ಪಕ್ಷ ಅಧಿಕಾರವನ್ನು ಹಿಡಿಯಿತು. ಇದನ್ನು ಪಕ್ಷ ಮನಗಂಡಿದೆ. ಈಗಾಗಲೇ ಶಾಸಕರು ಆಯ್ಕೆಯಾಗಿದ್ದಾರೆ. ಇದೇ ರೀತಿ ಸಚಿವರು ಸಹಾ ನೇಮಕವಾಗಿದೆ. ಅದೇ ರೀತಿ ಪಕ್ಷದ ಕಾರ್ಯಕರ್ತರಿಗೂ ಸಹಾ ಸ್ಥಾನವನ್ನು ನೀಡಬೇಕಿದೆ ಇದನ್ನು ಪಕ್ಷದ ಮುಖಂಡರು ಗಮನಿಸಿದ್ದಾರೆ. ಇದರಂತೆ ನಡೆಯಲಾಗುವುದು ಎಂದರು.



ರಾಜ್ಯ ಸರ್ಕಾರದಲ್ಲಿ ವಿವಿಧ ರೀತಿಯ ನಿಗಮಗಳು ಇವೆ. ಇದರಲ್ಲಿ ವಿವಿಧ ರೀತಿಯ ಹುದ್ದೆಗಳಿವೆ. ಪಕ್ಷದ ನಿಷ್ಠಾವಂತ ಕಾರ್ಯಕರ್ತರ ಪಟ್ಟಿಯನ್ನು ತಯಾರು ಮಾಡಿ ಅದನ್ನು ಕೆಪಿಸಿಸಿಗೆ ಕಳುಹಿಸುವುದರ ಮೂಲಕ ಅವರನ್ನು ನೇಮಕ ಮಾಡಲಾಗುವುದು ಎಂದು ಭರವಸೆ ನೀಡಿದರು.ಜಿಲ್ಲಾ ಸಮಿತಿಯವರಿಗೆ ಇದರ ಜವಾಬ್ದಾರಿಯನ್ನು ನೀಡಲಾಗಿದೆ. ಹತ್ತು ದಿನದಲ್ಲಿ ಪಟ್ಟಿ ತಯಾರು ಮಾಡಿ ನಮಗೆ ಕಳುಹಿಸಬೇಕಿದೆ. ಏಕೆಂದರೆ ಮುಂದಿನ ದಿನದಯಾವುದೇಸಮಯದಲ್ಲಿಯಾದರೂ ಸಹಾ ಲೋಕಸಭಾ ಚುನಾವಣೆಯ ದಿನಾಂಕ ಪ್ರಕಟವಾಗಬಹುದು. ಆಗ ನಿಗಮ ಮಂಡಳಿಗಳಿಗೆ ಯಾವುದೇ ನೇಮಕ ಮಾಡಲು ಬರುವುದಿಲ್ಲ. ಈ ಹಿನ್ನಲೆಯಲ್ಲಿ ಅತಿ ಶೀಘ್ರದಲ್ಲಿಯೇ ಪಟ್ಟಿಯನ್ನು ನೀಡಿ ಎಂದು ಜಿಲ್ಲಾಧ್ಯಕ್ಷರಿಗೆ ಸೂಚನೆ ನೀಡಿದರು.

ರಾಜ್ಯದಲ್ಲಿ ವಿಧಾನಸಭೆಯಲ್ಲಿ ಬಿಜೆಪಿ ಮತದಾರರಿಗೆ ಮಾಡಿದ ದ್ರೋಹದಿಂದ ಕಾಂಗ್ರೆಸ್ ಪಕ್ಷಕ್ಕೆ ಜಯಗಳಿಸಿ ಅಧಿಕಾರವನ್ನು ನೀಡಿದಂತೆ ಮುಂಬರುವ ಲೋಕಸಬಾ ಚುನಾವಣೆಯಲ್ಲಿಯೂ ಸಹಾ ಪಕ್ಷದ ಕಾರ್ಯಕರ್ತರು ನಿಷ್ಠೆಯಿಂದ ಕೆಲಸವನ್ನು ಮಾಡುವುದರ ಮೂಲಕ ಕರ್ನಾಟಕ ರಾಜ್ಯದಿಂದ ಅತಿ ಹೆಚ್ಚು ಕಾಂಗ್ರೆಸ್ ಸಂಸದರು ಆಯ್ಕೆಯಾಗಬೇಕಿದೆ. ಇದರ ಹೊಣೆಗಾರಿಕೆಯನ್ನು ಪಕ್ಷದ ಮುಖಂಡರು, ಕಾರ್ಯಕರ್ತರ ಮೇಲಿದೆ. ಇದನ್ನು ಸರಿಯಾದ ರೀತಿಯಲ್ಲಿ ನಿಭಾಯಿಸಿ ಎಂದು ಪಕ್ಷದ ಕಾರ್ಯಕರ್ತರಿಗೆ ಕರೆ ನೀಡಿ ರಾಜ್ಯದಲ್ಲಿ ಅಧಿಕಾರದಲ್ಲಿರುವ ಕಾಂಗ್ರೆಸ್ ಸರ್ಕಾರ ಚುನಾವಣೆಯ ಸಮಯದಲ್ಲಿ ಮತದಾರರಿಗೆ 5 ಗ್ಯಾರೆಂಟಿಗಳನ್ನು ನೀಡಿತ್ತು ಅದರಂತೆ ಅವುಗಳನ್ನು ಪೊರೈಸಿದೆ ಇದನ್ನು ಮತದಾರರಿಗೆ ತಿಳಿಸುವ ಕಾರ್ಯವನ್ನು ಕಾರ್ಯಕರ್ತರು ಮಾಡಬೇಕಿದೆ ಎಂದರು.

ಡಿಸಿಸಿಅಧ್ಯಕ್ಷತಾಜ್‌ಪೀರ್,ಕಾರ್ಯಾಧ್ಯಕ್ಷ ಹಾಲಸ್ವಾಮಿ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ನೇರ್ಲಗುಂಟೆ ರಾಮಪ್ಪ, ರಾಜ್ಯ ವಕ್ತಾರ ಡಿ.ಬಸವರಾಜು, ಕುಮಾರಗೌಡ, ಪ್ರಧಾನ ಕಾರ್ಯದರ್ಶಿಗಳಾದ ಸಂಪತ್ ಕುಮಾರ್ ಮೈಲಾರಪ್ಪ, ಮಹಿಳಾ ಘಟಕದ ಅಧ್ಯಕ್ಷರಾದ ಶ್ರೀಮತಿ ಗೀತಾ ನಂದಿನಿ ಗೌಡ, ಪ್ರಸನ್ನಕುಮಾರ್, ಮುದಸಿರ್, ಕಾರೇಹಳ್ಳಿ ಉಲ್ಲಾಸ್, ವೆಂಕಟೇಶ್, ಲಕ್ಷ್ಮೀಕಾಂತ, ಚೋಟು, ಶ್ರೀಮತಿ ಮೋಕ್ಷ ರುದ್ರಸ್ವಾಮಿ, ಸ್ವಾಮಿ ಮೂಡಲಗಿರಿಯಪ್ಪ, ಆಶ್ವಕ್ ಆಲಿ ಸೇರಿದಂತೆ ಇತರರು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಗಣರಾಜ್ಯೋತ್ಸವ: ಎಲ್ಲಾ ಅಧಿಕಾರಿಗಳು ಹಾಜರಿರಬೇಕು; ರೇಹಾನ್ ಪಾಷ



» ಚಳ್ಳಕೆರೆ

ಪ್ರತಿವರ್ಷದಂತೆ ಈ ವರ್ಷವೂ ಜ.26ರಂದು ಗಣರಾಜ್ಯೋತ್ಸವ ಕಾರ್ಯಕ್ರಮವನ್ನು ನಗರದ ಬಿಎಂ ಸರ್ಕಾರಿ ಪ್ರೌಢಶಾಲಾ ಮೈದಾನದಲ್ಲಿ ಹಮ್ಮಿಕೊಂಡಿದ್ದು, ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ತಾಲ್ಲೂಕು ಮಟ್ಟದ ಎಲ್ಲಾ ಅಧಿಕಾರಿಗಳು ತಪ್ಪದೆ ಹಾಜರಿಬೇಕೆಂದು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಅಧ್ಯಕ್ಷ, ತಹಶೀಲ್ದಾರ್ ರೇಹಾನ್ ಪಾಷ ತಿಳಿಸಿದರು. ಅವರು, ಬುಧವಾರ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ವಿವಿಧ ಇಲಾಖೆಯ ತಾಲ್ಲೂಕು ಮಟ್ಟದ ಅಧಿಕಾರಿಗಳ ಸಭೆ ನಡೆಸಿ ಮಾತನಾಡಿದರು. ವಿಶೇಷವಾಗಿ ಗಣರಾಜ್ಯೋತ್ಸವ ದಿನದಂದು ಯಾವುದೇ ಅಧಿಕಾರಿಗಳು ಗೈರಾಗದೆ ಕಾರ್ಯಕ್ರಮದಲ್ಲಿ ಪೂರ್ಣಪ್ರಮಾಣದಲ್ಲಿ ಭಾಗವಹಿಸಬೇಕು. ಕಾರ್ಯಕ್ರಮ ಆಯೋಜಿಸುವ ಎಲ್ಲಾ ಕಾರ್ಯಕ್ರಮಗಳ ಜವಾಬ್ದಾರಿಯನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು. ಅನಗತ್ಯ ಕಾರಣ ನೀಡಿ ಕಾರ್ಯಕ್ರಮದಿಂದ ದೂರ ಉಳಿದರೆ ಅಂತಹ ಅಧಿಕಾರಿಗಳ ವಿರುದ್ದ ಜಿಲ್ಲಾಧಿಕಾರಿಗಳ ಕಾನೂನು ಕ್ರಮಕ್ಕೆ ಶಿಫಾರಸ್ಸು ಮಾಡಲಾಗುವುದು. ಪ್ರತಿಯೊಬ್ಬ ಅಧಿಕಾರಿಯೂ ತಮಗೆ ಇರುವ ಜವಾಬ್ದಾರಿ ಹಾಗೂ ಹೊಣೆ ಅರಿತು ಕಾರ್ಯನಿರ್ವಹಿಸುವಂತೆ ಮನವಿ ಮಾಡಿದರು. ಸಭೆಯಲ್ಲಿ ಎಇಇ ಕಾವ್ಯ, ದಯಾನಂದ, ವಿಜಯಭಾಸ್ಕರ್, ಸಮಾಜ ಕಲ್ಯಾಣಾಧಿಕಾರಿ ಮಂಜುನಾಥ, ಬಿಸಿಎಂ ಅಧಿಕಾರಿ ದಿವಾಕರ, ಕೃಷಿ ಅಧಿಕಾರಿ ಅಶೋಕ್, ಬಿಇಒ ಕೆ.ಎಸ್.ಸುರೇಶ್, ಎಸ್ಟಿ ಅಧಿಕಾರಿ ಶಿವರಾಜು, ಸಿಡಿಪಿಒ ಹರಿಪ್ರಸಾದ್, ಕಾರ್ಮಿಕ ಅಧಿಕಾರಿ ಕುಸುಮಾ, ಪೌರಾಯುಕ್ತ ಸಿ.ಚಂದ್ರಪ್ಪ, ಪಶು ವೈದ್ಯಾಧಿಕಾರಿ ರೇವಣ್ಣ, ಅರಣ್ಯಾಧಿಕಾರಿ ಬಹುಗುಣ, ಎಇಒ ಸಂತೋಷ್, ಕಂದಾಯಾಧಿಕಾರಿ ಲಿಂಗೇಗೌಡ, ಗ್ರಾಮಲೆಕ್ಕಿಗ ಪ್ರಕಾಶ್, ಡಿ.ಶ್ರೀನಿವಾಸ್ ಮುಂತಾದವರು ಉಪಸ್ಥಿತರಿದ್ದರು.

### ಮುಖ್ಯಮಂತ್ರಿ ವಿರುದ್ಧ ಅವಹೇಳನಕಾರಿ ಹೇಳಿಕೆ: ದೇವರಾಜ್ ಖಂಡನೆ

» ಚಿಕ್ಕಮಗಳೂರು

ಜನಪರ ನಾಯಕ ಹಾಗೂ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಬಗ್ಗೆ ಅವಹೇಳನಕಾರಿ ಹಾಗೂ ವೈಯಕ್ತಿಕವಾಗಿ ನಿಂದಿಸಿರುವ ಸಂಸದ ಅನಂತ್‌ಕುಮಾರ್‌ಹೆಗ್ಡೆ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಬೇಕು ಎಂದು ಕೆಪಿಸಿಸಿ ವಕ್ತಾರ ಹೆಚ್.ಹೆಚ್. ದೇವರಾಜ್ ಹೇಳಿದ್ದಾರೆ. ಈ ಕುರಿತು ಹೇಳಿಕೆಯಲ್ಲಿ ತಿಳಿಸಿರುವ ಅವರು ರಾಜ್ಯದಿಂದ ಎರಡ್ಮೂರು ಬಾರಿ ಸಂಸದರಾಗಿ ಕಾರ್ಯನಿರ್ವಹಿಸಿರುವ ಅನಂತ್‌ಕುಮಾರ್ ಸಂಸ್ಕಾರವಂತರಾಗಿ ಮಾತನಾಡುವುದನ್ನು ರೂಢಿಸಿಕೊಳ್ಳಬೇಕು. ಇದನ್ನು ಹೊರತುಪಡಿಸಿ ರಾಜ್ಯದ ಮುಖ್ಯಮಂತ್ರಿಗಳ ಬಗ್ಗೆ ಹಗುರವಾಗಿ ಟೀಕಿಸುವುದು ಅವರಿಗೆ ಶೋಭೆ ತರು ವುದಿಲ್ಲ ಎಂದಿದ್ದಾರೆ.ರಾಜ್ಯದ ಗಣ್ಯ ವ್ಯಕ್ತಿಗಳ ಬಗ್ಗೆ ಟೀಕಿಸುವುದು, ನಿಂದಿಸುವ ಕೆಲಸದಲ್ಲಿ ತೊಡಗಿರುವ ಅನಂತ್‌ಕುಮಾರ್ ತಮ್ಮ ಪ್ರವೃತ್ತಿಯನ್ನು ಬದಲಾಯಿಸದಿದ್ದರೆ ಹೋರಾಟದ ಮೂಲಕ ಎಚ್ಚರಿಸಬೇಕಾಗುತ್ತದೆ. ಈ ರೀತಿ ವರ್ತನೆ ಹೊಂದಿರು ವ ಅನಂತ್‌ಕುಮಾರ್‌ಹೆಗ್ಡೆ ಅವರ ಸಂಸದೀಯ ಸದಸ್ಯತ್ವ ಅನರ್ಹಗೊಳಿಸಿ ಕಾನೂನಿನ ಪ್ರಕಾರ ಗಡಿಪಾರು ಮಾಡ ಬೇಕು ಎಂದು ಒತ್ತಾಯಿಸಿದರು.ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಬಡವರು, ದಲಿತರು, ಕಾರ್ಮಿಕರು ಹಾಗೂ ಹಿಂದುಳಿದ ಪರ ಧ್ವನಿ ಯಾಗಿ ಕೆಲಸ ಮಾಡಿದ ಅಪರೂಪದ ನಾಯಕ. ಅನ್ನಭಾಗ್ಯ, ವಸತಿ ರಹಿತ ಕುಟುಂಬಗಳಿಗೆ ಸೂರು ಒದಗಿಸುವ ಯೋಜನೆಗಳನ್ನು ಜಾರಿಗೊಳಿಸಿರುವ ಕೀರ್ತಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹೊರತುಪಡಿಸಿ ಬಿಜೆಪಿ ನಾಯಕರಿ ಗಿಲ್ಲ ಎಂದು ತಿಳಿಸಿದ್ದಾರೆ.

### ಜಿಟಿಟಿಸಿಯಲ್ಲಿ ಅತಿಥಿ ಉಪನ್ಯಾಸಕರ ಹುದ್ದೆಗೆ ಅರ್ಜಿ ಅಹ್ವಾನ

» ದಾವಣಗೆರೆ

ಹರಿಹರ ಸರ್ಕಾರಿ ಉಪಕರಣ ಮತ್ತು ತರಬೇತಿ ಕೇಂದ್ರದಲ್ಲಿ ಟೂಲ್ & ಡೈ ಮೇಕಿಂಗ್ ಹಾಗೂ ಡಿಪ್ಲೋಮಾ ಇನ್ ಆಟೋಮೆಷನ್ ಮತ್ತು ರೊಬೋಟಿಕ್ಸ್ ವಿಭಾಗದಲ್ಲಿ ಖಾಲಿ ಇರುವ ಅರೆಕಾಲಿಕ ಅತಿಥಿ ಉಪನ್ಯಾಸಕರ ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ. ಬೋಧನೆಯಲ್ಲಿ ಕನಿಷ್ಠ ಒಂದು ವರ್ಷ ಅನುಭವವಿರುವ ಎಂ.ಎಸ್ಸಿ (ಭೌತಶಾಸ್ತ್ರ) ದಲ್ಲಿ ಸ್ನಾತಕೋತ್ತರ ಪದವಿ ಹೊಂದಿರುವ ಅಭ್ಯರ್ಥಿಗಳು ಮಾತ್ರ ಅರ್ಹರಾಗಿರುತ್ತಾರೆ. ಜನವರಿ 25 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದ್ದು ಹೆಚ್ಚಿನ ಮಾಹಿತಿಗೆ ಕಾಲೇಜು ಸಂಪರ್ಕಿಸಲು ಅಥವಾ ಮೊ. 8711913947 ಗೆ ಕರೆ ಮಾಡಲು ಪ್ರಾಂಶುಪಾಲರು ತಿಳಿಸಿದ್ದಾರೆ.

ಗಣರಾಜ್ಯೋತ್ಸವ ಆಚರಣೆ ಪೂರ್ವಭಾವಿ ಸಭೆ- ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಸೂಚನೆ

# ಕಟ್ಟುನಿಟ್ಟಾಗಿ ತಮ್ಮ ಜವಾಬ್ದಾರಿ ಪಾಲಿಸಿ: ಡಿಸಿ

» ಚಿತ್ರದುರ್ಗ

ಜ. 26 ರಂದು ನಡೆಯುವ ಭಾರತ ಗಣರಾಜ್ಯೋತ್ಸವ ಕಾರ್ಯಕ್ರಮವನ್ನು ಅರ್ಥಪೂರ್ಣ ಹಾಗೂ ವ್ಯವಸ್ಥಿತವಾಗಿ ಆಯೋಜಿಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಕೇಂದ್ರದಲ್ಲಿ ಭಾರತ ಗಣರಾಜ್ಯೋತ್ಸವ ದಿನಾಚರಣೆಯನ್ನು ಆಚರಿಸುವ ಕುರಿತು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಏರ್ಪಡಿಸಲಾದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಭಾರತ ಗಣರಾಜ್ಯೋತ್ಸವ ದಿನಾಚರಣೆಯು ದೇಶಪ್ರೇಮ, ದೇಶಭಕ್ತಿ ಹಾಗೂ ಭಾರತ ಸಂವಿಧಾನ ಆಚರಣೆಯ ಪ್ರತೀಕವಾಗಿದ್ದು, ಈ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಲು ವಿವಿಧ ಇಲಾಖೆಗಳು ಸಮನ್ವಯತೆಯಿಂದ ಉತ್ತಮ ರೀತಿಯಲ್ಲಿ ಕಾರ್ಯನಿರ್ವಹಿಸಿ ಗಣರಾಜ್ಯೋತ್ಸವವನ್ನು ಆಚರಿಸಬೇಕು. ಇಲಾಖೆಯ ಅಧಿಕಾರಿಗಳಿಗೆ ನೀಡಿರುವ ಜವಾಬ್ದಾರಿಯನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಸೂಚನೆ ನೀಡಿದರು.ಭಾರತ ಗಣರಾಜ್ಯೋತ್ಸವ ಕಾರ್ಯಕ್ರಮವನ್ನು ಜನವರಿ 26 ರಂದು ಬೆಳಿಗ್ಗೆ 9ಕ್ಕೆ ಚಿತ್ರದುರ್ಗ ನಗರದ ಸರ್ಕಾರಿ ವಿಜ್ಞಾನ ಕಾಲೇಜು (ಮುರುಘರಾಜೇಂದ್ರ ಕ್ರೀಡಾಂಗಣ) ಮೈದಾನದಲ್ಲಿ ಆಚರಿಸಲಾಗುವುದು. ಶಿಷ್ಟಾಚಾರದ ನಿಯಮಗಳಂತೆ ಭಾರತ ಗಣರಾಜ್ಯೋತ್ಸವ ಸಮಾರಂಭದ ಆಹ್ವಾನ ಪತ್ರಿಕೆ ಮುದ್ರಿಸಿ, ಮುದ್ರಿತ ಆಹ್ವಾನ ಪತ್ರಿಕೆಗಳನ್ನು ಜನಪ್ರತಿನಿಧಿಗಳಿಗೆ, ಗಣ್ಯರಿಗೆ ವಿತರಿಸಲು ಕ್ರಮವಹಿಸಬೇಕು ಎಂದರು.

ಗಣರಾಜ್ಯೋತ್ಸವ ಅಂಗವಾಗಿ ಅಂದು ಬೆಳಿಗ್ಗೆ ಕ್ರೀಡಾಂಗಣದಲ್ಲಿ ದೇಶಭಕ್ತಿ, ಸಂವಿಧಾನದ ಮಹತ್ವವನ್ನು ಜನರ ಮನ ಮುಟ್ಟುವ ರೀತಿಯಲ್ಲಿ ಉತ್ತಮವಾದ ಆಯ್ದ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಬೇಕು. ಅಂತರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಿದ ಜಿಲ್ಲೆಯ ಸಾಧಕರನ್ನು ಗುರುತಿಸಿ ಸನ್ಮಾನಿಸಲು ಅಗತ್ಯ ಕ್ರಮ ವಹಿಸಬೇಕು ಎಂದು ಸೂಚನೆ ನೀಡಿದರು.ರಾಷ್ಟ್ರ ಧ್ವಜಾರೋಹಣದ ನಂತರ ಶಾಲಾ ಮಕ್ಕಳಿಂದ ಮೂರು ಆಯ್ದ ಉತ್ತಮ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಮತ್ತು ಸಂಜೆ ನಗರದ ತ.ರಾ.ಸು. ರಂಗಮಂದಿರದಲ್ಲಿ ಆಯ್ದ ಉತ್ತಮ 15 ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಜನಾಕರ್ಷಣೀಯವಾಗಿ ದೇಶಭಕ್ತಿ ಬಿಂಬಿಸುವ ಕನ್ನಡ ಹಾಡುಗಳಿಗೆ ಹೆಚ್ಚಿನ ಆದ್ಯತೆ ನೀಡಿ ಕಾರ್ಯಕ್ರಮಗಳನ್ನು ವ್ಯವಸ್ಥೆಗೊಳಿಸಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಅವರು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಕೆ.ರವಿಶಂಕರ್ ರೆಡ್ಡಿ ಅವರಿಗೆ ಸೂಚಿಸಿದರು.

ರಾಷ್ಟ್ರ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ, ಪ್ಯಾರಾ ಒಲಂಪಿಕ್‌ನಲ್ಲಿ ಸಾಧನೆ ಮಾಡಿದ ಸಾಧಕರಿಗೆ, ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ನಿಜವಾದ ಸಾಧಕರನ್ನು ಗುರುತಿಸಿ, ಸನ್ಮಾನ ಮಾಡಬೇಕು. ಈ ನಿಟ್ಟಿನಲ್ಲಿ ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ವಿವಿಧ ಕ್ಷೇತ್ರಗಳನ್ನು ಗುರುತಿಸಿ ಪಟ್ಟಿ ತಯಾರಿಸಬೇಕು ಎಂದು ಸೂಚನೆ ನೀಡಿದರು.

ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಮಾತನಾಡಿ, ಗಣರಾಜ್ಯೋತ್ಸವ ಆಚರಣೆಗೆ ಸಂಬಂಧಪಟ್ಟಂತೆ ಸ್ವಾಗತ, ಶಿಷ್ಟಾಚಾರ, ಆಹ್ವಾನ ಪತ್ರಿಕೆ ಹಾಗೂ ವೇದಿಕೆ ಸಮಿತಿ, ಪೆರೇಡ್ ಸಮಿತಿ, ಸಾಂಸ್ಕೃತಿಕ ಕಾರ್ಯಕ್ರಮಗಳ ಸಮಿತಿ ಸೇರಿದಂತೆ ವಿವಿಧ ಸಮಿತಿಗಳನ್ನು ರಚಿಸಲಾಗಿದ್ದು, ಆಯಾ ಸಮಿತಿಯಲ್ಲಿರುವ ಅಧಿಕಾರಿಗಳು ತಮಗೆ ವಹಿಸಿದ ಕಾರ್ಯಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು ಎಂದು ತಿಳಿಸಿದರು.ಗಣರಾಜ್ಯೋತ್ಸವಕಾರ್ಯಕ್ರಮ ನಡೆಯುವ ನಗರದ ಸರ್ಕಾರಿ ವಿಜ್ಞಾನ ಕಾಲೇಜು ಮೈದಾನದ ಆವರಣ ಸ್ವಚ್ಛಗೊಳಿಸಿ ಮೈದಾನದಲ್ಲಿ ಸ್ವಾಗತ ಕಮಾನುಗಳನ್ನು ವ್ಯವಸ್ಥೆ ಮಾಡಬೇಕು. ಕಾರ್ಯಕ್ರಮಕ್ಕೆ ದೀಪಾಲಂಕಾರ, ಉತ್ತಮ ಧ್ವನಿವರ್ಧಕ ಮತ್ತು ಕುಡಿಯುವ ನೀರಿನ ವ್ಯವಸ್ಥೆ ಹಾಗೂ ಗಣ್ಯರು ಕುಳಿತುಕೊಳ್ಳುವುದಕ್ಕೆ ಉತ್ತಮವಾದ ಆಸನ ವ್ಯವಸ್ಥೆ, ಆಸನಗಳ ಹತ್ತಿರ ನಾಮಫಲಕ, ತೋಟಗಾರಿಕೆ ಇಲಾಖೆಯಿಂದ ಹೆಚ್ಚಿನ ಆಕರ್ಷಣೆ ಉಳ್ಳ ಹೂವಿನ ಕುಂಡಗಳ ಪಡೆದು ಸಿಂಗರಿಸಬೇಕು. ಸ್ವಾತಂತ್ರ್ಯ ಹೋರಾಟಗಾರರು, ಗಣ್ಯರು, ಅಧಿಕಾರಿಗಳು, ಮಾಧ್ಯಮದವರು ಆಸಿನರಾಗಲು ಪ್ರತ್ಯೇಕವಾಗಿ ಆಸನದ ವ್ಯವಸ್ಥೆ ಮಾಡಬೇಕು ಎಂದು ನಗರಸಭೆ ಅಧಿಕಾರಿಗಳಿಗೆ ಸೂಚಿಸಲಾಯಿತು. ವೇದಿಕೆಯ ಮೇಲೆ ಯಾವುದೇ ಸಮಸ್ಯೆಗಳು ಉದ್ಭವಿಸದಂತೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದರು. ಭಾರತ ಗಣರಾಜ್ಯೋತ್ಸವದ ಪೆರೇಡ್ ವ್ಯವಸ್ಥೆಯನ್ನು ಏರ್ಪಡಿಸಲು ಕ್ರಮ ತೆಗೆದುಕೊಳ್ಳುವಂತೆ ಪೊಲೀಸ್ ಇಲಾಖೆಗೆ ಸೂಚಿಸಿದ ಅವರು, ಪೊಲೀಸ್ ಸಿಬ್ಬಂದಿ, ಹೋಂ ಗಾರ್ಡ್, ಅರಣ್ಯ ಇಲಾಖೆ, ಅಬಕಾರಿ, ಎನ್‌ಸಿಸಿ ಹಾಗೂ ಪ್ರೌಢ ಶಾಲಾ ಮಕ್ಕಳು ಒಳಗೊಂಡಂತೆ ಸೇರಿದಂತೆ ವಿವಿಧ ತುಕಡಿಗಳು ಪಥ ಸಂಚಲನಕ್ಕೆ ಸಜ್ಜುಗೊಳಿಸಲು ತಿಳಿಸಿದ ಅವರು, ಅತ್ಯುತ್ತಮ ಪ್ರದರ್ಶನ ನೀಡಿದ ಮೂರು ಪೆರೇಡ್ ತಂಡಗಳನ್ನು ಆಯ್ಕೆ ಮಾಡಲು ಸಮಿತಿ ರಚಿಸಬೇಕು. ಆಯ್ಕೆಯಾದ ಮೂರು ಪೆರೇಡ್ ತಂಡಗಳಿಗೆ ಗಣರಾಜ್ಯೋತ್ಸವದ ವೇದಿಕೆ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪತ್ರ, ನೆನಪಿನ ಕಾಣಿಕೆ ನೀಡಿ ಗೌರವಿಸಲಾಗುವುದು ಎಂದರು.ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ. ಸೋಮಶೇಖರ್,ಅಪರಜಿಲ್ಲಾಧಿಕಾರಿಬಿ.ಟಿ. ಕುಮಾರಸ್ವಾಮಿ, ಜಿಲ್ಲಾ ಸಶಸ್ತ್ರ ಪೊಲೀಸ್‌ನ ಡಿವೈಎಸ್‌ಪಿ ಗಣೇಶ್ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು, ಮೋಕ್ಷಾ ರುದ್ರಸ್ವಾಮಿ, ತಿಪ್ಪೇಸ್ವಾಮಿ, ಆನಂದಕುಮಾರ್, ಟಿ.ಕೆ. ಬಸವರಾಜ್ ಸೇರಿದಂತೆ ವಿವಿಧ ಗಣ್ಯರು ಉಪಸ್ಥಿತರಿದ್ದರು.



### ಸಂವಿಧಾನ ಜಾಗೃತಿ

ಗಣರಾಜ್ಯೋತ್ಸವದ ಅಂಗವಾಗಿ "ಸಂವಿಧಾನ ಮತ್ತು ದೇಶದ ಸಮಗ್ರತೆ" ಸಾರುವ ವಿಶೇಷ ಜಾಗೃತಿ ಕಾರ್ಯಕ್ರಮವನ್ನು ಜ. 26 ರಿಂದ ಫೆ. 23 ರವರೆಗೆ ಜಿಲ್ಲೆಯಾದ್ಯಂತ ಎಲ್ಲ ಗ್ರಾಮ ಪಂಚಾಯತಿ ಹಾಗೂ ನಗರ ಮತ್ತು ಸ್ಥಳೀಯ ಸಂಸ್ಥೆಗಳ ಕೇಂದ್ರಸ್ಥಾನದಲ್ಲಿ ಹಮ್ಮಿಕೊಳ್ಳುವಂತೆ ಸರ್ಕಾರ ನಿರ್ದೇಶನ ನೀಡಿದೆ. ಇದರನ್ವಯ ಈ ವಿಶೇಷ ಅಭಿಯಾನಕ್ಕೆ ಜ. 26 ರಂದು ಜಿಲ್ಲಾ ಉಸ್ತುವಾರಿ ಸಚಿವರು ಚಾಲನೆ ನೀಡುವರು. ವಿಶೇಷ ಜಾಗೃತಿ ಅಭಿಯಾನದಲ್ಲಿ ಸಂವಿಧಾನ ಮತ್ತು ದೇಶದ ಸಮಗ್ರತೆ ಬಿಂಬಿಸುವ ಎಲ್‌ಇಡಿ ಪರದೆಯಲ್ಲಿ ಸಂದೇಶ ಸಾರುವ ಸ್ತಬ್ಧಚಿತ್ರ, ಕಲಾತಂಡಗಳು ಭಾಗವಹಿಸಲಿವೆ. ಜಾಗೃತಿ ಜಾಥಾವು ಜನವರಿ 26 ರಿಂದ ಫೆಬ್ರವರಿ 23 ವರೆಗೆ ಜಿಲ್ಲೆಯ ಎಲ್ಲ 189 ಗ್ರಾಮ ಪಂಚಾಯಿತಿಗಳಲ್ಲಿ ಹಾಗೂ 7 ನಗರ ಸ್ಥಳೀಯ ಸಂಸ್ಥೆಗಳಲಿ ಸಂಚರಿಸಲಿದೆ. ಈ ಅಭಿಯಾನವನ್ನು ಜಿಲ್ಲೆಯಲ್ಲಿ ಯಶಸ್ವಿಗೊಳಿಸುವ ನಿಟ್ಟಿನಲ್ಲಿ ಅಗತ್ಯ ಸಿದ್ಧತೆ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

# ಕೆರೆ ಅಂಗಳ ಅಳತೆ ಮಾಡಿ ಒತ್ತುವರಿ ತೆರವು ಮಾಡಿ

» ಚಿತ್ರದುರ್ಗ

ಅಪ್ಪರಸನಹಳ್ಳಿಯ ಕಾಟಯ್ಯನ ಕೆರೆ ಅಂಗಳ ಅಳತೆ ಮಾಡಿಸಿ ಒತ್ತುವರಿ ತೆರವುಗೊಳಿಸಿ ಹಾಗೂ ರಿ.ಸ.ನಂ.62 ಗೋಕಟ್ಟೆ ಅಳತ ಮಾಡಿಸಿ ಒತ್ತುವರಿ/ತೆರವುಗೊಳಿಸುವ ಬಗ್ಗೆ, ಮತ್ತು ದಾರಿ ಮಾಡಿಕೊಂಡುವಂತೆ ಆಗ್ರಹಿಸಿ ಹೊಳಲ್ಕೆರೆ ತಾ, ಅಪ್ಪರಸನಹಳ್ಳಿಯ ಶ್ರೀ ಅಮೃತ ಲಿಂಗೇಶ್ವರ ಕೆರೆ ಬಳಕೆದಾರರ ಸಂಘದವತಿಯಿಂದ ಗ್ರಾಮಸ್ಥರು ಜಿಲ್ಲಾಡಳಿತವನ್ನು ಒತ್ತಾಯಿಸಿದ್ದಾರೆ.

ಅಪ್ಪರಸನಹಳ್ಳಿಯ ಕಾಟಯ್ಯನ ಕರೆ ಸಾದರಹಳ್ಳಿ ರಿ.ಸ.ನಂ 43 25 ಎಕರೆ 19 ಗುಂಟೆ ಅರಸನಘಟ್ಟ ರಿ.ಸ.ನಂ 129ರಲ್ಲಿ 51 ಎಕರೆ 39 ಗುಂಟೆ ಮಾಕುಂಟೆ ರಿ.ಸ.ನಂ 22ರಲ್ಲಿ 11ಎಕರೆ 13 ಗುಂಟೆ ಕೆರೆ ಅಂಗಳ ಜಾಗವನ್ನು ಅಳತೆ ಮಾಡಿಸಿ ಒತ್ತುವರಿಯಾದ ಜಾಗವನ್ನು ತೆರವುಗೊಳಿಸಿ ಕೆರೆ ಸುತ್ತ ಏರಿ ನಿರ್ಮಿಸಿ ಕೊಡಬೇಕು. ಕೆರೆ ಏರಿಯು ಶಿಥಿಲಗೊಂಡಿದ್ದು ಏರಿಯು ಅಪಾಯ ಮಟ್ಟದಲ್ಲಿದೆ. ಅದ್ದರಿಂದ ಏರಿಯನ್ನು ಬಂದೊಬಸ್ತು ಮಾಡಿಕೊಡಬೇಕು. ಕೆರೆಗೆ ಓಡಾಡಲು ಮತ್ತು ಕೆರೆ ಅಭಿವೃದ್ಧಿ ಪಡಿಸಲು ರಸ್ತೆಯ ಅವಶ್ಯಕತೆ ಇರುವುದರಿಂದ ದಾರಿಯನ್ನು ನಕಾಶೆಯ ಪ್ರಕಾರ ಬಿಡಿಸಿ ಕೊಡಬೇಕೆಂದು ಗ್ರಾಮಸ್ಥರು ಮನವಿ ಮಾಡಿದ್ದಾರೆ.

ಈ ಅರ್ಜಿಯನ್ನು ತಾಲ್ಲೂಕು ಕಛೇರಿ, ಕರೆ ಪ್ರಾದಿಕಾರ, ಜಿಲ್ಲಾ ಕಛೇರಿಗೆ ನೀಡಿರುತ್ತೇವೆ ಇದರಿಂದ ಯಾವುದೇ ಕ್ರಮವನ್ನು ಕೈಗೊಂಡಿಲ್ಲ ಮತ್ತು ಕ್ರಮ ಕೈಗೊಂಡ ಬಗ್ಗೆ ಮಾಹಿತಿ ಬಂದಿಲ್ಲ. ಅದ್ದರಿಂದ 8 ದಿನ ಒಳಗಡೆ ಕ್ರಮವನ್ನು ಕೈಗೊಳ್ಳಬೇಕೆಂದು ಗ್ರಾಮಸ್ಥರ ಮತ್ತು ಸಂಘದ ಪರವಾಗಿ ವಿನಂತಿಸಿಕೊಳ್ಳುತ್ತೇವೆ. ವಿಳಂಬವಾದಲ್ಲಿ ಅಥವಾ ಕ್ರಮವನ್ನು ತೆಗೆದುಕೊಳ್ಳದೇ ಹೋದಲ್ಲಿ ಉಗ್ರ ಹೋರಾಟಕ್ಕೆ ಮುಂದಾಗಲಿದ್ದಾರೆ ಎಂದು ಜಿಲ್ಲಾಡಳಿತಕ್ಕೆ ಎಚ್ಚರಿಕೆಯನ್ನು ನೀಡಿದ್ದಾರೆ.

ಅಪ್ಪರನನಹಳ್ಳಿಯಲ್ಲಿ ಗೋಕಟ್ಟೆ ರಿ.ಸ.ನಂ.4 ರಲ್ಲಿ, 6ಎಕರೆ ಗುಂಟೆ ಸರ್ಕಾರಿ ಜಮಿನು ಒತ್ತುವರಿ ಆಗಿದೆ ಮನವಿಯನ್ನು ತಹಶೀಲ್ದಾರರಿಗೆ ಮನವಿ ಕೊಟ್ಟಿರುತ್ತೇವೆ. ಮನವಿಗೆ ಯಾವುದೆ ಕ್ರಮ ಕೈಗೊಂಡಿಲ್ಲ ಮತ್ತು ಕ್ರಮದ ಬಗ್ಗೆ ಮಾಹಿತಿ ತಿಳಿಸಿಲ್ಲ. ಆದ್ದರಿಂದ ತ್ವರಿತಗತಿಯಲ್ಲಿ ಸರ್ವೆ ಮಾಡಿಸಿ ಅದ್ದ್ ಬಸ್ತು ಮಾಡಿಕೊಡಬೇಕೆಂದು ಮಾನವಿ ಮಾಡಿದ್ದಾರೆ.ಮಹಾರುದ್ರಪ್ಪ, ಶಿವರುದ್ರಪ್ಪ, ವೀರಯ್ಯ, ಪ್ರಕಾಶ್, ಚಂದ್ರಯ್ಯ, ರಾಜ್, ಶಿವ ನಾಗರಾಜ್ ವಿರೇಶ್, ವೇದಮೂರ್ತಿಸೇರಿದಂತೆ ಇತರರು ಭಾಗವಹಿಸಿದ್ದರು.



### ಫೆಬ್ರವರಿ 24ಕ್ಕೆ ಹಿರಿಯೂರು ತೇರು ಮಲ್ಲೇಶ್ವರ ಸ್ವಾಮಿ ಬ್ರಹ್ಮ ರಥೋತ್ಸವ

» ಹಿರಿಯೂರು

ನಗರದ ಸುಪ್ರಸಿದ್ಧ ದಕ್ಷಿಣ ಕಾಶಿ ಶ್ರೀ ತೇರು ಮಲ್ಲೇಶ್ವರ ಸ್ವಾಮಿ ದೇವರ ಬ್ರಹ್ಮರಥೋತ್ಸವ ಫೆಬ್ರವರಿ 24ರ ಶನಿವಾರ ನಡೆಯಲಿದೆ ಎಂದು ತಹಶೀಲ್ದಾರ್ ರಾಜೇಶ್ ಕುಮಾರ್ ಹೇಳಿದರು. ಇಲ್ಲಿನ ತೇರುಮಲ್ಲೇಶ್ವರ ಸ್ವಾಮಿ ದೇವಾಲಯದ ಆವರಣದಲ್ಲಿ ಕರೆದಿದ್ದ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು. ಪ್ರತಿ ವರ್ಷದಂತೆ ಈ ಬಾರಿಯೂ ರಥೋತ್ಸವವನ್ನು ಭಕ್ತಿ ಭಾವದಿಂದ ಹಾಗೂ ವಿಜೃಂಭಣೆಯಿಂದ ನಡೆಸಲಾಗುವುದು ಇದಕ್ಕೆ ವಿವಿಧ ಇಲಾಖೆಗಳ ಅಧಿಕಾರಿ ವರ್ಗದವರು ಹಾಗೂ ಕೈವಾಡಸ್ಥರು ಮತ್ತು ಸಮಸ್ತ ಭಕ್ತಾದಿಗಳು ಸಹಕಾರ ನೀಡಬೇಕು ಎಂದು ಕೋರಿದರು. ಫೆಬ್ರವರಿ 13 ರಂದು ಕಂಕಣ ಕಲ್ಯಾಣೋತ್ಸವದೊಂದಿಗೆ ಪೂಜಾ ಕಾರ್ಯಕ್ರಮಗಳು ಆರಂಭವಾಗಲಿವೆ. ಪ್ರತಿದಿನ ಸಂಜೆ ದೇವರ ಉತ್ಸವಗಳು ನಡೆಯಲಿವೆ 23ರ ಶುಕ್ರವಾರ ಸಂಜೆ ದೊಡ್ಡ ಉತ್ಸವ ನಡೆಯಲಿದ್ದು 24 ರಂದು ಮಧ್ಯಾಹ್ನ ಶ್ರೀ ತೇರುಮಲೇಶ್ವರ ಸ್ವಾಮಿಯ ಬ್ರಹ್ಮ ರಥೋತ್ಸವ ಸಂಜೆ ಶ್ರೀ ಚಂದ್ರಮೌಳೇಶ್ವರ ಮತ್ತು ಶ್ರೀ ಉಮಾಮಹೇಶ್ವರ ದೇವರ ರಥೋತ್ಸವ ನಡೆಯಲಿದೆ ಎಂದರು. ಪೂರ್ವಭಾವಿ ಸಭೆಯಲ್ಲಿ ಪೌರಯುಕ್ತರಾದ ಮಹಾಂತೇಶ್, ಪ್ರಸನ್ನ ಕುಮಾರ್ ಜೋಯಿಸ್, ವಿಶ್ವನಾಥಾಚಾರ್ಯ, ನಾಗರಾಜ ಆಚಾರ್ಯ ಮಲ್ಲೇಶ್ ಆಚಾರ್ಯ ಡಾ .ವೀರಣ್ಣ ಬೀರೇನಹಳ್ಳಿ ವೀರಕರಿಯಣ್ಣ ದೇವಸ್ಥಾನದ ಮುಖ್ಯಸ್ಥರಾದ ವೀರಪ್ಪ ವೀರಕರಿಯಣ್ಣ ನಗರಸಭೆ ಮಾಜಿ ಅಧ್ಯಕ್ಷರಾದ ಶಿವರಂಜನಿ ಯಾದವ್ ಆರೋಗ್ಯಧಿಕಾರಿ ಸಂಧ್ಯಾ ಪೊಲೀಸ್ ಇಲಾಖೆ ಎ.ಎಸ್.ಐ.ರಾಘವ ರೆಡ್ಡಿ ಆಡಳಿತಾಧಿಕಾರಿ ಸ್ವಾಮಿ, ವಿಎ ಮಯವರ್ಮ ಬಸವರಾಜ್ ಬೆಸ್ಕಾಂ ಅಧಿಕಾರಿ ರವಿಕುಮಾರ್, ಕೊಟ್ರೇಶ್, ತಾಲೂಕು ಆರೋಗ್ಯ ಅಧಿಕಾರಿ ಟಿ ವೆಂಕಟೇಶ್, ಮುಖಂಡರಾದ ಜಿ.ಎಲ್ ಮೂರ್ತಿ, ವಿ ಎಚ್ ರಾಜು, ಸತ್ಯನಾರಾಯಣ ಮೂರ್ತಿ, ಭೋಜಣ್ಣ, ಜಗದೀಶ್ ಭಂಡಾರಿ ಮಲ್ಲೇಶ್, ದಿವು ಶಂಕರ್, ವಿ ಸಿದ್ದೇಶ್ ಎಂ ರವೀಂದ್ರನಾಥ್ ಎಂ ಪಿ ರಾಜು ಎಂ ಕೃಷ್ಣ ಭಕ್ತಾದಿಗಳು ಭಾಗವಹಿಸಿದ್ದರು.

## ಪ್ರಮುಖ ಸುದ್ದಿ

# ರಕ್ತದಾನ ಮಾನವ ಕುಲದ ಅತ್ಯಂತ ಶ್ರೇಷ್ಠ ದಾನ: ರಾಜೇಶ್ವರಿ

» ದಾವಣಗೆರೆ

ಚರಿತ್ರೆಯಿಂದ ವರ್ತಮಾನದವರೆಗೆ ಮನುಷ್ಯ ಎಷ್ಟೇ ವಿಕಾಸ ಹೊಂದಿದರೂ, ಏನೆಲ್ಲಾ ಸಾಧಿಸಿದ್ದಾನೆ ಎಂದು ಕೊಂಡರೂ ಸಹ ಇಂದಿಗೂ ಕೃತಕ ರಕ್ತವನ್ನು ಮಾತ್ರ ಉತ್ಪಾದಿಸಲು ಸಾಧ್ಯವಾಗಿಲ್ಲ. ಹಾಗಾಗಿ, ಒಬ್ಬ ಮನುಷ್ಯ, ಮತ್ತೊಬ್ಬನಿಗೆ ನೀಡಬಹುದಾದ ಅಮೂಲ್ಯ ಕೊಡುಗೆಗಳಲ್ಲಿ ರಕ್ತದಾನವೂ ಒಂದು. ರಕ್ತದಾನವು ಮಾನವಕುಲಕ್ಕೆ ಅತ್ಯಂತ ಮಹತ್ವದ ಸೇವೆಯೆಂದು ಪರಿಗಣಿತವಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರಿ ಎನ್.ಹೆಗಡೆ ಹೇಳಿದರು.

ದಾವಣಗೆರೆಯಜಿಲ್ಲಾನ್ಯಾಯಾಲಯಗಳ ಸಂಕೀರ್ಣದಲ್ಲಿ ಜಿಲ್ಲಾ ರಕ್ತನಿಧಿ ಭಂಡಾರ, ಜಿಲ್ಲಾ ವಕೀಲರ ಸಂಘ, ಜಿಲ್ಲಾ ಕಾನೂನು ಸೇವೆಗಳಪ್ರಾಧಿಕಾರದಾವಣಗೆರೆಇವರುಗಳ ಸಹಭಾಗಿತ್ವದಲ್ಲಿ ಆಯೋಜಿಸಲಾದ ಸ್ವಯಂಪ್ರೇರಿತ ರಕ್ತದಾನ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.

ಮುಖ್ಯ ಅತಿಥಿಗಳಾಗಿದ್ದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಕರೆಣ್ಣವರ್ ಮಾತನಾಡಿ, ರಕ್ತದಾನ ಪುಣ್ಯದ ಕೆಲಸ, ಅಷ್ಟೇ ಅಲ್ಲ, ನಮ್ಮ ಆರೋಗ್ಯ ಮತ್ತು ಸಮುದಾಯದ ಆರೋಗ್ಯವನ್ನೂ ಗಮನದಲ್ಲಿಟ್ಟುಕೊಂಡು ಸ್ವಯಂಪ್ರೇರಿತ ರಕ್ತದಾನ ಶಿಬಿರ ಅತ್ಯಂತ ಮಹತ್ವಪೂರ್ಣ, ಈ ಶಿಬಿರ ನಡೆಸುತ್ತಿರುವ ಜಿಲ್ಲಾ ವಕೀಲರ ಸಂಘದ ಕಾರ್ಯ ಶ್ಲಾಘನೀಯ ಎಂದರು.

ಚಿಗಟೇರಿ ಜನರಲ್ ಆಸ್ಪತ್ರೆಯ ವೈದ್ಯೆ ಡಾ.ಗೀತಾ ಮಾತನಾಡಿ, ಇತ್ತೀಚೆಗೆ ಸಾರ್ವಜನಿಕ ಆಸ್ಪತ್ರೆಗಳಲ್ಲಿ ರಕ್ತದ ಅಭಾವ ಕಂಡುಬರುತ್ತಿದೆ. ಆಸ್ಪತ್ರೆಗೆ ಸುಮಾರು ನಾಲ್ಕು ಜಿಲ್ಲೆಗಳ ರೋಗಿಗಳು ದಾಖಲಾಗುತ್ತಿದ್ದಾರೆ. ಇದರಿಂದ ನಿಗದಿತ ಪ್ರಮಾಣದ ರಕ್ತದ ಲಭ್ಯತೆಯ ಕೊರತೆ ಉಂಟಾಗಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್. ಎಚ್.ಅರುಣಕುಮಾರ್ ಮಾತನಾಡಿ, ಅಪರೂಪದ ಬ್ಲಡ್ ಗ್ರೂಪಿನ ಸದಸ್ಯರು ಅವಶ್ಯವಾಗಿ ರಕ್ತದಾನ ಮಾಡಿದಲ್ಲಿ ಅನೇಕ ಜೀವಗಳನ್ನು ಉಳಿಸಿದ ತೃಪ್ತಿ ನಮಗಿರುತ್ತದೆ. ರಕ್ತದಾನ ಮಾಡುವುದರಿಂದ ದೇಹಕ್ಕೆ ಹೊಸ ರಕ್ತ ಪಡೆಯುವ ಅವಕಾಶ ಸಿಗುತ್ತದೆ. ಇದರಿಂದ ಹೃದ್ರೋಗದ ಅಪಾಯಗಳನ್ನು ತಡೆಗಟ್ಟಲು ಸಾಧ್ಯವಾಗುತ್ತದೆ ಎಂದರು.

ಗಣರಾಜ್ಯೋತ್ಸವದ 74ನೇ ವರ್ಷದ ಸಂದರ್ಭದಲ್ಲಿ ವಕೀಲರ ಸಂಘದಿಂದ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದ್ದು, ಇಂದು ನಡೆದ ರಕ್ತದಾನ ಶಿಬಿರದಲ್ಲೆ ವಕೀಲರು ಅತ್ಯಂತ ಉತ್ಸಾಹದಿಂದ ಪಾಲ್ಗೊಂಡು, ಸರ್ಕಾರಿ ಆಸ್ಪತ್ರೆಗಳನ್ನು ಸಬಲಗೊಳಿಸುವಲ್ಲಿ ನೆರವಾಗಿದ್ದಾರೆ ಎಂದು ಶ್ಲಾಘಿಸಿದರು.

ಶಿಬಿರದಲ್ಲಿಪ್ರಧಾನಸಿವಿಲ್‌ನ್ಯಾಯಾಧೀಶ ಸಮೀರ ಕೊಳ್ಳಿ, ಜಿಲ್ಲಾಸ್ಪತ್ರೆಯ ವೈದ್ಯ ಡಾ.ಮುರಳೀಧರ, ಹಿರಿಯ ವಕೀಲರು, ಸಿಬ್ಬಂದಿವರ್ಗ ಇದ್ದರು.

ಜಿಲ್ಲಾ ನ್ಯಾಯಾಲಯದ ಮುಖ್ಯ ಆಡಳಿತಾಧಿಕಾರಿ ಬಿ.ಶ್ರೀನಿವಾಸ್, ಜಿಲ್ಲಾ ವಕೀಲರ ಸಂಘದ ಕಾರ್ಯದರ್ಶಿ ಎಸ್.ಬಸವರಾಜ್, ಉಪಾಧ್ಯಕ್ಷ ಗೋಪನಾಳ್ ಜಿ.ಕೆ.ಬಸವರಾಜ್, ಸಹಕಾರ್ಯದರ್ಶಿ ಎ.ಎಸ್. ಮಂಜುನಾಥ್, ಕಾರ್ಯಕಾರಿ ಸಮಿತಿ ಸದಸ್ಯರಾದ ಭಾಗ್ಯಲಕ್ಷ್ಮಿ, ವಾಗೀಶ್ ಕಟ್ಟಿಗೆಹಳ್ಳಿಮಠ, ಎಲ್.ನಾಗರಾಜ್, ನೀಲಕಂಠಯ್ಯ, ಅಜೇಯ್ ಆವರಗೆರೆ, ಚೌಡಪ್ಪ ಇತರರು ಇದ್ದರು. ಈ ವೇಳೆ ವಕೀಲರು, ನ್ಯಾಯಾಂಗ ಮತ್ತು ಅಭಿಯೋಜನಾ ಇಲಾಖೆಯ ಸಿಬ್ಬಂದಿಗಳು ರಕ್ತದಾನ ಮಾಡಿದರು.



## ಫಾಸ್ಟ್ ನ್ಯೂಸ್

### ಪದವಿಪೂರ್ವ ವಿದ್ಯಾರ್ಥಿಗಳ ಅಧ್ಯಯನಕ್ಕೆ ಪ್ರಶ್ನೋತ್ತರ ಹೊತ್ತಿಗೆ

» **ಚಿತ್ರದುರ್ಗ**

ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯು ವಿಜ್ಞಾನ ಪ್ರತಿಭಾನ್ವೇಷಣೆ ಕಾರ್ಯಕ್ರಮದಡಿ ಪ್ರಶ್ನೋತ್ತರ ಹೊತ್ತಿಗೆಯನ್ನು ಪದವಿಪೂರ್ವ ವಿದ್ಯಾರ್ಥಿಗಳ ಅಧ್ಯಯನಕ್ಕೆ ಪೂರಕವಾಗುವಂತೆ ಭೌತ ವಿಜ್ಞಾನ, ರಸಾಯನ ವಿಜ್ಞಾನ, ಗಣಿತ ಮತ್ತು ಜೀವ ವಿಜ್ಞಾನ ವಿಷಯಗಳಲ್ಲಿ ನುರಿತ ಸಂಪನ್ಮೂಲ ತಜ್ಞರ ಸಹಕಾರದೊಂದಿಗೆ ಹೊರತರಲಾಗಿದೆ. ಪ್ರಶ್ನೋತ್ತರ ಪುಸ್ತಕವನ್ನು ಅಕಾಡೆಮಿಯ ವೆಬ್‌ತಾಣ https://kstacaademy.in/kn/sts-k/ ದಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ ಎಂದು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಎ.ಎಂ. ರಮೇಶ್ ತಿಳಿಸಿದ್ದಾರೆ.

### ಅನಾಮಧೇಯ ಶವ ಪತ್ತೆಗೆ ಮನವಿ

» **ಚಿತ್ರದುರ್ಗ**

ಹೊಳಲ್ಕೆರೆ ತಾಲ್ಲೂಕು ಪಂಪಾಪುರ ಮತ್ತು ರಾಮೇನಹಳ್ಳಿ ಗ್ರಾಮಗಳ ನಡುವಿನ ಆಂಜನೇಯ ಅವರ ತೋಟದ ರಸ್ತೆಯ ಬದಿಯಲ್ಲಿ ಸುಮಾರು 45 ರಿಂದ 40 ವರ್ಷದ ಅನಾಮಧೇಯ ಗಂಡಸು ಅನಾರೋಗ್ಯದಿಂದ ಬಳಲಿ ಮೃತಪಟ್ಟಿದ್ದಾರೆ. ಈ ವ್ಯಕ್ತಿ ಸಾಧಾರಣ ಮೈಕಟ್ಟು, ಗೋಧಿ ಮೈ ಬಣ್ಣ, ಸುಮಾರು-5.2 ಅಡಿ ಎತ್ತರ, ಅಗಲವಾದ ಮುಖ, ಎದೆಯ ಎಡಭಾಗದ ಹೊಟ್ಟೆಯ ಹತ್ತಿರ ಕಪ್ಪು ಮಚ್ಚೆ ಇರುತ್ತೆ. ಬಿಳಿ ಮತ್ತು ಕಪ್ಪು ಕುರುಚಲು ಗಡ್ಡ, 2 ಇಂಚು ಉದ್ದದ ಕಪ್ಪು ಮತ್ತು ಬಿಳಿ ಕೂದಲು, ಕಾಫಿ ಕಲರ್ ಬರ್ಮೋಡ, ಹಾಫ್ ಬಿಳಿ ಬಣ್ಣದ ಬನಿಯನ್ ಮತ್ತು ಕೆಂಪು ಮತ್ತು ಬಿಳಿ ಮಿಶ್ರಿತ ಟವಲ್ ಧರಿಸಿರುತ್ತಾರೆ. ಈ ವ್ಯಕ್ತಿಯ ಬಗ್ಗೆ ಮಾಹಿತಿ ದೊರತೆ ಕೂಡಲೆ ಚಿತ್ರಹಳ್ಳಿ ಗೇಟ್ ಪೊಲೀಸ್ ಠಾಣೆ ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

### ನಾಯಕನಹಟ್ಟಿ ಪಟ್ಟಣ ಪಂಚಾಯಿತಿ: ಜ.23ರಂದು ಆಯ-ವ್ಯಯ ಪೂರ್ವಸಭೆ

» **ಚಿತ್ರದುರ್ಗ**

ನಾಯಕನಹಟ್ಟಿ ಪಟ್ಟಣ ಪಂಚಾಯತಿಯ 2024-25ನೇ ಸಾಲಿನ ಆಯ-ವ್ಯಯದ ಪ್ರಥಮ ಪೂರ್ವಭಾವಿ ಸಭೆ ಜ.23 ರಂದು ಮಂಗಳವಾರ ಬೆಳಿಗ್ಗೆ 11 ಗಂಟೆಗೆ ಪಟ್ಟಣ ಪಂಚಾಯತಿ ಕೌನ್ಸಿಲ್ ಸಭಾಂಗಣದಲ್ಲಿ ಜರುಗಲಿದೆ. ಚಳ್ಳಕೆರೆ ತಹಶೀಲ್ದಾರ್ ಹಾಗೂ ಪಟ್ಟಣ ಪಂಚಾಯಿತಿ ಆಡಳಿತಾಧಿಕಾರಿ ರೆಹನ್‌ಪಾಷ ಅಧ್ಯಕ್ಷತೆ ವಹಿಸುವರು. ಪಟ್ಟಣದ ಅಭಿವೃದ್ಧಿಯ ದೃಷ್ಟಿಯಿಂದ ಪಟ್ಟಣ ಪಂಚಾಯಿತಿ ಸದಸ್ಯರು, ಹಿರಿಯ ನಾಗರಿಕರು, ಸ್ವಯಂ ಸೇವಾ ಸಂಘದ ಮುಖ್ಯಸ್ಥರು, ವಿವಿಧ ಇಲಾಖೆ ಮುಖ್ಯಸ್ಥರು ಹಾಗೂ ಸಾರ್ವಜನಿಕರು ಸಭೆಗೆ ಹಾಜರಾಗಿ ಸೂಕ್ತ ಸಲಹೆ ಅಭಿಪ್ರಾಯಗಳನ್ನು ನೀಡುವಂತೆ ಪ್ರಕಟಣೆ ತಿಳಿಸಿದೆ.

### ಮಾಯಾವತಿಯವರ ಹುಟ್ಟುಹಬ್ಬ ಆಚರಣೆ



» **ಚಿತ್ರದುರ್ಗ**

ಬಹುಜನ ಸಮಾಜ ಪಕ್ಷದ ವತಿಯಿಂದ ಅಕ್ಕ ಮಾಯಾವತಿಯವರ 68 ಹುಟ್ಟುಹಬ್ಬವನ್ನು ಜನ ಕಲ್ಯಾಣ ದಿನವನ್ನಾಗಿ ಆಚರಿಸಲಾಯಿತು. ಬಹುಜನ ಸಮಾಜ ಪಕ್ಷದ ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಹಾಗೂ ಜಿಲ್ಲಾ ಉಸ್ತುವಾರಿ ಅಶೋಕ್ ಚಕ್ರವರ್ತಿ ಮಾತನಾಡಿ ಮಾಯಾವತಿಯವರ ಜೀವನ ಮತ್ತು ಮುಖ್ಯಮಂತ್ರಿಯಾಗಿದ್ದಾಗ ಕೊಟ್ಟಂತಹ ಕೊಡುಗೆಗಳ ಕುರಿತು ಬೂತ್ ಮಟ್ಟದಲ್ಲಿ ಮನೆ ಮನೆಗೆ ತಿಳಿಸಿ ಬಹುಜನ ಸಮಾಜ ಪಕ್ಷವನ್ನು ಸಂಘಟಿಸಬೇಕೆಂದು ತಿಳಿಸಿದರು. ಚಿತ್ರದುರ್ಗ ಲೋಕಸಭೆ ಉಸ್ತುವಾರಿ ಮಂಜುನಾಥಸ್ವಾಮಿ ನಾಯಕ್, ಜಿಲ್ಲಾ ಸಂಯೋಜಕರುಗಳಾದ ಕೆ.ಎನ್.ದೊಡ್ಡೆಟ್ಟಪ್ಪ, ಶಿವಮೂರ್ತಿ, ಜಿಲ್ಲಾಧ್ಯಕ್ಷ ಎನ್.ಪ್ರಕಾಶ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹನುಮಂತರಾಯ ಓ, ರಾಮಸ್ವಾಮಿ, ಶ್ರೀನಿವಾಸ್, ಜಗದೀಶ್, ಶಿವಕುಮಾರ್, ಹಿರಿಯೂರು ತಾಲ್ಲೂಕು ಉಸ್ತುವಾರಿ ರಾಘವೇಂದ್ರ, ಟಿ.ರಾಮು, ಸುರೇಶ್, ಮಹಾಲಿಂಗಪ್ಪ, ಬಿ.ಟಿ.ಶಿವಕುಮಾರ್, ಕರಿಬಸಪ್ಪ, ಪ್ರಕಾಶ್, ಆಕಾಶ್ ಇನ್ನು ಮುಂತಾದವರು ಹುಟ್ಟುಹಬ್ಬ ಆಚರಣೆಯಲ್ಲಿ ಪಾಲ್ಗೊಂಡಿದ್ದರು.

---

**ಬೂಸ್ಟ್ ಲಸಿಕಾ ಅಧಿವೇಶನದಲ್ಲಿ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್**

# ಕೋವಿಡ್ ಭಯ ಬೇಡ, ಎಚ್ಚರಿಕೆ, ಜಾಗೃತಿ ಇರಲಿ


» **ಚಿತ್ರದುರ್ಗ**

ಚಿತ್ರದುರ್ಗ ನಗರದ ವಾಸವಿ ವಿದ್ಯಾಸಂಸ್ಥೆಯ ಆವರಣದಲ್ಲಿ ಬುಧವಾರ ಕೋವಿಡ್-19 ಬೂಸ್ಟರ್ ಲಸಿಕಾ ಅಧಿವೇಶನ ನಡೆಸಲಾಯಿತು.

ಕಾರ್ಬಿಬ್ಯಾಕ್ಸ್ ಲಸಿಕಾ ಅಧಿವೇಶನಕ್ಕೆ ಚಾಲನೆ ನೀಡಿ, ತಾಲ್ಲೂಕು ಆರೋಗ್ಯ ಅಧಿಕಾರಿ ಡಾ. ಬಿ.ವಿ.ಗಿರೀಶ್ ಮಾತನಾಡಿ, ಜೆ.ಎನ್ 1 ಆತಂಕ ಬೇಡ, ಮುಂಜಾಗ್ರತೆ ಇರಲಿ. ಅರ್ಹರು ಮುಂಜಾಗ್ರತಾ ಲಸಿಕೆ ಪಡೆಯಿರಿ. ಸಾರ್ವಜನಿಕರಿಗೆ ಅನುಕೂಲವಾಗಲೆಂದು ಜಿಲ್ಲಾ ಆಸ್ಪತ್ರೆಯ ಕೊಠಡಿ ಸಂಖ್ಯೆ-23ರಲ್ಲಿ ಲಸಿಕಾ ವ್ಯವಸ್ಥೆ ಕಲ್ಪಿಸಲಾಗಿದೆ. ಸಾರ್ವಜನಿಕರು ಇದರ ಸದುಪಯೋಗಪಡಿಸಿಕೊಳ್ಳಿ ಎಂದರು

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ ಮಾತನಾಡಿ, ಮೊದಲ ಹಂತದಲ್ಲಿ 60 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ಆರೋಗ್ಯ ಇಲಾಖೆಯ ಸೇವಾ ನೌಕರರಿಗೆ ಸಹವರ್ತಿ ಕಾಯಿಲೆಗಳನ್ನು ಹೊಂದಿರುವವರಿಗೆ ಈಗಾಗಲೇ ಬೂಸ್ಟರ್ ಡೋಸ್ ಪಡೆದು 26 ವಾರಗಳನ್ನ ಸಂಪೂರ್ಣಗೊಳಿಸಿದವರಿಗೆ ಮುನ್ನೆಚ್ಚರಕ ಡೋಸ್ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ. ಅಗತ್ಯ ದಾಖಲಾತಿಗಳನ್ನು ತಂದು ಈ ಹಿಂದೆ ಕೋವ್ಯಾಕ್ಸಿನ್ ಅಥವಾ ಕೋವಿಶೀಲ್ಡ್ ಯಾವುದೇ ಲಸಿಕೆ ಪಡೆದಿದ್ದರು ಸಹ ಕಾರ್ಬಿವ್ಯಾಕ್ಸ್ ಲಸಿಕೆ ಪಡೆಯಬಹುದಾಗಿದೆ ಯಾವುದೇ ತೊಂದರೆ ಆಗೋದಿಲ್ಲ ಎಂದರು.

ಕೋವಿಡ್ ರೋಗಕ್ಕೆ ಸರಿ ಹೊಂದುವಂತಹ ಅಭ್ಯಾಸಗಳನ್ನ ಅಂದರೆ ಮಾಸ್ಕ ಧರಿಸುವುದು, ಸಾಮಾಜಿಕ ಅಂತರ ಕಾಯ್ದುಕೊಳ್ಳುವುದು, ಕೈಗಳನ್ನ ಸ್ಯಾನಿಟೈಸರ್ ಉಪಯೋಗಿಸಿ ಸ್ವಚ್ಛಗೊಳಿಸಿಕೊಳ್ಳುವುದು. ಸೀತಾ ಕೆಮ್ಮು ನೆಗಡಿಯ ಲಕ್ಷಣಗಳು ಕಂಡುಬಂದಲ್ಲಿ ಕೋವಿಡ್ ತಪಾಸಣೆ ಮಾಡಿಸಿಕೊಳ್ಳುವುದು. ಸರ್ಕಾರದ ಮಾರ್ಗದರ್ಶನದಂತೆ ನಿಯಮಗಳನ್ನು ಪಾಲಿಸುವುದು ಎಂದರು.



ವಾಸವಿ ವಿದ್ಯಾ ಸಂಸ್ಥೆಯ ಅಧ್ಯಕ್ಷ ಸತ್ಯನಾರಾಯಣ ಶೆಟ್ಟರು ಮಾತನಾಡಿ, ನಾವಿರುವಲ್ಲಿಯೇ ಬಂದು ಲಸಿಕೆ ನೀಡುತ್ತಿರುವುದು ಪ್ರಸಂಶನೀಯ. 60 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು ತಪ್ಪದೇ ಲಸಿಕೆಯನ್ನು ಪಡೆದುಕೊಳ್ಳಿ. ಸರ್ಕಾರದ ಮಾರ್ಗಸೂಚಿಯಂತೆ ಮಾಸ್ಕ್ ಧಾರಣೆ ಮಾಡುವುದು ಪಾಲಿಸಿ ಎಂದರು.

ಕಾರ್ಯಕ್ರಮದಲ್ಲಿ ಪಿ.ಎಲ್ ಸುರೇಶ್‌ರಾಜ್, ಅಜಯಕುಮಾರ, ಮೋಹನ್ ಕುಮಾರ್ ಗುಪ್ತ, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ರಂಗಾರೆಡ್ಡಿ, ಗಂಗಾಧರರೆಡ್ಡಿ, ಗೋಪಾಲಕೃಷ್ಣ, ಶಶಾಂಕ್, ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿ ಮಂಜುಳಾ ಮತ್ತು ಆಶಾ ಕಾರ್ಯಕರ್ತೆಯರು ಭಾಗವಹಿಸಿದ್ದರು. ಕಾರ್ಯಕ್ರಮದಲ್ಲಿ 60 ಜನರಿಗೆ ಬೂಸ್ಟರ್ ಲಸಿಕಾ ವ್ಯವಸ್ಥೆ ಕಲ್ಪಿಸಲಾಯಿತು.

---

# ಸಾಮರಸ್ಯತೆ ಮೂಡಿಸುವಲ್ಲಿ ಸಿದ್ದರಾಮೇಶ್ವರರ ಚಿಂತನೆಗಳು ಸಹಕಾರಿ: ಶಾಸಕ ಟಿ.ರಘುಮೂರ್ತಿ

» **ಚಳ್ಳಕೆರೆ**

ಧಾರ್ಮಿಕ ನೆಲೆಗಟ್ಟಿನಲ್ಲಿ ಸಮಾಜವನ್ನು ಪರಿವರ್ತನೆ ಮಾಡಿ ಜನಸಾಮಾನ್ಯರಲ್ಲಿ ವಚನಗಳ ಮೂಲಕ ಜಾಗೃತಿ ಮೂಡಿಸಿದ ಸಿದ್ದರಾಮೇಶ್ವರ ಚಿಂತನೆಗಳು ಸಮಾಜದಲ್ಲಿ ಇಂದಿಗೂ ಪ್ರಸ್ತುತ. ಅವರ ದಿವ್ಯದೃಷ್ಠಿಯ ಫಲವಾಗಿ ಸಮಾಜದ ಎಲ್ಲಾ ವರ್ಗಗಳಲ್ಲಿ ಸಮಾನತೆಯನ್ನು ಕಾಣುತ್ತಿದ್ದೇವೆಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಮಂಗಳವಾರ ತಾಲ್ಲೂಕು ರಾಷ್ಟ್ರೀಯ ಹಬ್ಬಗಳ ಸಮಿತಿ ಹಮ್ಮಿಕೊಂಡಿದ್ದ ಕಾಯಕಯೋಗಿ ಸಿದ್ದರಾಮೇಶ್ವರ ಜಯಂತಿ ಕಾರ್ಯಕ್ರಮವನ್ನು ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಸಮಾಜದ ಪರಿವರ್ತನೆಯಲ್ಲಿ ಹಲವಾರು ರಾಷ್ಟ್ರೀಯ ನಾಯಕರು ಹಾಗೂ ಧಾರ್ಮಿಕ ಮುಖಂಡರ ಕೊಡಗೆ ಅಪಾರವಾಗಿದೆ. ಕಾಯಕಯೋಗಿ ಶ್ರೀಸಿದ್ದರಾಮೇಶ್ವರಸ್ವಾಮೀಯೂ ಸಹ ಮುಗ್ದ ಜನರಲ್ಲಿ ಅಡಗಿದ್ದ ಅಜ್ಞಾನದ ಕತ್ತಲನ್ನು ಹೋಗಲಾಡಿಸುವಲ್ಲಿ ತುಂಬಾಪರಿಶ್ರಮ ವಹಿಸಿದ್ದರು. ಅವರ ಅಂದಿನ ಕಾಯಕ ಇಂದು ಸಮಾಜದಲ್ಲಿ ಎಲ್ಲರಲ್ಲೂ ಸಾಮರಸ್ಯ ಮೂಡಲು ಸಹಕಾರಿಯಾಗದೆ ಎಂದರು.



ತಹಶೀಲ್ದಾರ್ ರೇಹಾನ್‌ಪಾಷ ಮಾತನಾಡಿ, ಸರ್ಕಾರ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಮೂಲಕ ಈ ಮಹಾನ್ ದಾರ್ಶನಿಕರ ಕೊಡುಗೆಗಳ ಬಗ್ಗೆ ಮತ್ತಷ್ಟು ತಿಳಿದುಕೊಳ್ಳಲು ಇಂತಹ ಕಾರ್ಯಕ್ರಮ ಏರ್ಪಡಿಸಿದೆ. ಕಾಯಕಯೋಗಿ ಸಿದ್ದರಾಮೇಶ್ವರರು ಅಘಾದವಾದ ಜ್ಞಾನವನ್ನು ಹೊಂದಿದ್ದರು. ಸಮಾಜದ ಎಲ್ಲಾ ವರ್ಗಗಳ ಕಲ್ಯಾಣಕ್ಕಾಗಿ ಶ್ರಮಿಸಿದವರು ಎಂದರು.

ಕಾರ್ಯಕ್ರಮದಲ್ಲಿ ಪೌರಾಯುಕ್ತ ಸಿ.ಚಂದ್ರಪ್ಪ, ಬಿಸಿಎಂ ಅಧಿಕಾರಿ ದಿವಾಕರ್, ಡಿವೈಎಸ್ಪಿ ರಾಜಣ್ಣ, ಬಿಇಒ ಕೆ.ಎಸ್.ಸುರೇಶ್, ಪಶುವೈದ್ಯಾಧಿಕಾರಿರೇವಣ್ಣ, ಕೃಷಿ ಅಧಿಕಾರಿ ಜೆ.ಅಶೋಕ್, ನಗರಸಭಾ ಸದಸ್ಯರಾದ ಬಿ.ಟಿ.ರಮೇಶ್‌ಗೌಡ, ಟಿ.ಮಲ್ಲಿಕಾರ್ಜುನ್, ಕೆ.ವೀರಭದ್ರಪ್ಪ, ಕೆಪಿಸಿಸಿ ರಾಜ್ಯಪ್ರಧಾನ ಕಾರ್ಯದರ್ಶಿ ಎಂ.ರಾಮಪ್ಪ, ತಾಲ್ಲೂಕು ಬೋವಿ ಸಮಾಜದ ಅಧ್ಯಕ್ಷ ಎಚ್.ಆಂಜನೇಯ, ಗೌರವಾಧ್ಯಕ್ಷ ಆರ್.ಜಗದೀಶ್, ಪರಶುರಾಮಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶಶಿಧರ, ಹಿರಿಯ ಮುಖಂಡ ವೆಂಕಟಪ್ಪ, ಶಿಕ್ಷಕ ತಿಮ್ಮಣ್ಣ, ಚಿದಾನಂದ ಮುಂತಾದವರು ಉಪಸ್ಥಿತರಿದ್ದರು.



ಮಾತೃಶ್ರೀ ವಿದ್ಯಾಸಂಸ್ಥೆಯಲ್ಲಿ ಮಕರ ಸಂಕ್ರಾಂತಿ ಸಂಭ್ರಮ

---

# ಬಗರ್‌ಹುಕುಂ ಸಾಗುವಳಿದಾರರ ಸಮಾವೇಶಕ್ಕೆ ಯಾದವರೆಡ್ಡಿ ಚಾಲನೆ



» **ಚಿತ್ರದುರ್ಗ**

ಬಗರ್‌ಹುಕುಂ ಸಾಗುವಳಿದಾರರು ಕಳೆದ ಎಪ್ಪತ್ತು ವರ್ಷಗಳಿಂದಲೂ ಹಕ್ಕುಪತ್ರಕ್ಕಾಗಿ ಹೋರಾಟ ಮಾಡಿಕೊಂಡು ಬರುತ್ತಿದ್ದರೂ ಪರಿಹಾರ ನೀಡದ ಸರ್ಕಾರಗಳು ನಿಜಕ್ಕೂ ಬಡ ಜನತೆಗೆ ಅಕ್ಷಮ್ಯ ಅಪರಾಧವೆಸಗುತ್ತ ಕಾಲಹರಣ ಮಾಡುತ್ತಿವೆ ಎಂದು ಸಾಮಾಜಿಕ ಚಿಂತಕ ಜೆ.ಯಾದವರೆಡ್ಡಿ ಹೇಳಿದರು.

ಭೂಮಿ ಮತ್ತು ವಸತಿ ಹಕ್ಕು ವಂಚಿತರ ಹೋರಾಟ ಸಮಿತಿಯಿಂದ ಜಿಲ್ಲಾ ಕಾಂಗ್ರೆಸ್ ಕಚೇರಿ ಮುಂಭಾಗ ಬುಧವಾರ ಏರ್ಪಡಿಸಲಾಗಿದ್ದ ಚಿತ್ರದುರ್ಗ ವಿಧಾನಸಭಾ ಕ್ಷೇತ್ರದ ಬಗರ್‌ಹುಕುಂ ಸಾಗುವಳಿದಾರರ ಸಮಾವೇಶ ಉದ್ಘಾಟಿಸಿ ಮಾತನಾಡಿದರು.

ಪ್ರಜಾಪ್ರಭುತ್ವದಲ್ಲಿ ನಂಬಿಕೆಯಿಟ್ಟು ಜನ ಓಟು ಹಾಕಿದ್ದಾರೆ. ಸುಳ್ಳು ಹೇಳಿಕೊಂಡು ದಿನಗಳನ್ನು ನೂಕುವುದು ಯಾವುದೆ ಸರ್ಕಾರಕ್ಕೆ ಶೋಭೆಯಲ್ಲ. ಐವತ್ತು ಅರವತ್ತು ವರ್ಷಗಳಿಂದಲೂ ಹೋರಾಟ ಮಾಡಿಕೊಂಡು ಬರುತ್ತಿರುವ ಬಗರ್‌ಹುಕುಂ ಸಾಗುವಳಿದಾರರ ತಾಳ್ಮೆ ಕೆಣಕುವುದು ಬೇಡ. ಹೊಟ್ಟೆ ಪಾಡಿಗಾಗಿ ಕನಿಷ್ಠ ಎರಡು ಮೂರು ಎಕರೆಗಳನ್ನು ಸಾಗುವಳಿ ಮಾಡುತ್ತಿರುವ ಬಡವರಿಗೆ ಭೂಮಿ ಹಕ್ಕು ಪತ್ರ ನೀಡುವುದು ತಪ್ಪೇನಲ್ಲ. ಎಲ್ಲದಕ್ಕೂ ಸಕಾಲ ಎನ್ನುವ ಕಾಯಿದೆಯಿದೆ. ಅರ್ಜಿ ಸಲ್ಲಿಸಿ ಇಂತಿಷ್ಟು ದಿನಗಳಲ್ಲಿ ಕೆಲಸ ಮಾಡಿಕೊಡಬೇಕೆಂಬ ನಿಯಮ ಬಗರ್‌ಹುಕಂ ಸಾಗುವಳಿದಾರರಿಗೆ ಅನ್ವಯಿಸುವುದಿಲ್ಲವೇ. ಇದು ಅಧಿಕಾರಿಗಳ ಹೊಣೆಗೇಡಿತನವೋ ಇಲ್ಲ ರಾಜಕಾರಣಿಗಳ ನಿರ್ಲಕ್ಷ್ಯವೋ ಎನ್ನುವುದು ಗೊತ್ತಾಗುತ್ತಿಲ್ಲ. ಹಾಗಾಗಿ ನ್ಯಾಯಾಂಗ ಮಧ್ಯ ಪ್ರವೇಶಿಸಿ ಬಗರ್‌ಹುಕುಂ ಸಾಗವಳಿದಾರರಿಗೆ ಭೂಮಿ ಹಕ್ಕುಪತ್ರ ಕೊಡುವಂತೆ ಸರ್ಕಾರಕ್ಕೆ ಸೂಚಿಸುವುದು ಒಳ್ಳೆಯದು ಎಂದು ಜೆ.ಯಾದವರೆಡ್ಡಿ ಅಭಿಪ್ರಾಯಪಟ್ಟರು.

ಭೂಮಿ ಮತ್ತು ವಸತಿ ಹಕ್ಕು ವಂಚಿತರ ಹೋರಾಟ ಸಮಿತಿ ರಾಜ್ಯ ಕಾರ್ಯದರ್ಶಿ ಕುಮಾರ್ ಸಮತಳ ಮಾತನಾಡಿ ಚಿತ್ರದುರ್ಗ ವಿಧಾನಸಭಾ ಕ್ಷೇತ್ರದಲ್ಲಿ ಬಗರ್‌ಹುಕುಂ ಸಾಗುವಳಿ ಮಾಡುತ್ತಿರುವವರಿಗೆ ಶಾಸಕರು ಭೂಮಿ ಹಕ್ಕುಪತ್ರಗಳನ್ನು ಕೊಡಬೇಕು. ಯಾವುದೇ ಕಾರಣಕ್ಕೂ ಭೂಮಿ ಉಳುಮೆ ಮಾಡುತ್ತಿರುವವರನ್ನು ಒಕ್ಕಲೆಬ್ಬಿಸಬಾರದು. ಒಂದು ವೇಳೆ ಒಕ್ಕಲೆಬ್ಬಿಸುವುದೇ ಆದಲ್ಲಿ ಪರ್ಯಾಯ ವ್ಯವಸ್ಥೆ ಕಲ್ಪಿಸಬೇಕು ಎಂದು ಹೇಳಿದರು.

---

## ಪ್ರಮುಖ ಸುದ್ದಿ

**ಭಾರತೀಯ ಕ್ರಿಕೆಟ್‌ಗೆ ವಿಶ್ವಮಟ್ಟದಲ್ಲಿ ಆಗ್ರಸ್ಥಾನ : ಪಿಎಸ್‌ಐ ಕೆ.ಸತೀಶ್‌ನಾಯ್ಕ**

# ಯುವ ಜನಾಂಗವನ್ನು ಹೆಚ್ಚು ಆಕರ್ಷಿಸಿರುವುದು ಕ್ರಿಕೆಟ್

» **ಚಳ್ಳಕೆರೆ**

ವಿಶ್ವಮಟ್ಟದಲ್ಲಿ ಭಾರತೀಯ ಕ್ರಿಕೆಟ್ ಆಟಕ್ಕೆ ತನ್ನದೇಯಾದ ಮಾನ್ಯತೆ ಇದೆ. ಇಂದು ಕ್ರಿಕೆಟ್ ಆಟವನ್ನು ಹಳ್ಳಿಯಿಂದ ದಿಲ್ಲಿಯ ತನಕ ನೋಡಬಹುದಾಗಿದೆ. ಯುವ ಜನಾಂಗ ಕ್ರಿಕೆಟ್ ಆಟದ ಬಗ್ಗೆ ಹೆಚ್ಚು ಆಕರ್ಷಿತರಾಗಿದ್ದಾರೆ. ಉತ್ತಮ ಆಟ ಪ್ರದರ್ಶನದ ಮೂಲಕ ಕ್ರಿಕೆಟನ್ನು ಇನ್ನಷ್ಟು ಜನಪ್ರಿಯಗೊಳಿಸಬೇಕೆಂದು ಪಿಎಸ್‌ಐ ಕೆ.ಸತೀಶ್‌ನಾಯ್ಕ ತಿಳಿಸಿದರು.

ಅವರು, ಬುಧವಾರ ನಗರದ ಡಿ.ಸುಧಾಕರ್ ಕ್ರೀಡಾಂಗಣದಲ್ಲಿ ಚಳ್ಳಕೆರೆಯ ಕ್ರಿಕೆಟ್ ಲವರ್ಸ್ ತಂಡ ಆಯೋಜಿಸಿದ್ದ ಜಿಲ್ಲಾ ಮಟ್ಟದ ಅಂಬಾರಿ ಆನೆ ಅರ್ಜುನ ಕಫ್ ಟೂರ್ನಿಮೆಂಟ್‌ನ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು. ಕ್ರಿಕೆಟ್ ಜನಪ್ರಿಯತೆ ಬಗ್ಗೆ ನಾವೆಲ್ಲರೂ ಹೆಚ್ಚು ಸಂತೋಷ ಪಡಬೇಕಿದೆ. ಕ್ರಿಕೆಟ್ ಆಟದಿಂದ ಮನಸಿಗೆ ನೆಮ್ಮದಿಯ ಜೊತೆಗೆ ಉತ್ತಮ ಆರೋಗ್ಯವಂತರಾಗಿಯೂ ಸಹ ಇರುವ ಅವಕಾಶಗಳಿವೆ ಎಂದರು. ಪ್ರಾಸ್ತಾವಿಕವಾಗಿ ಮಾತನಾಡಿದ ಚಳ್ಳಕೆರೆಯ ಕ್ರಿಕೆಟ್ ಲವರ್ಸ್ ತಂಡ ವ್ಯವಸ್ಥಾಪಕ ಡಿ.ಎಸ್. ಆದರ್ಶ ಮಾತನಾಡಿ, ಜಿಲ್ಲಾ ಮಟ್ಟದ ಈ ಪಂದ್ಯಾವಳಿಯಲ್ಲಿ ಒಟ್ಟು 32 ತಂಡಗಳು ಭಾಗವಹಿಸಿದ್ದು, ಮೂರು ದಿನಗಳ ಕಾಲ ಪ್ರದರ್ಶನ ನಡೆದಿದ್ದು, ಅಂತಿಮವಾಗಿ ಚಳ್ಳಕೆರೆಯ ಫೈರ್‌ಬಾಯ್ಸ್ ಪ್ರಥಮ ಸ್ಥಾನ, ಭರತ್ ಕ್ರಿಕೆಟರ್ಸ್ ದ್ವಿತೀಯ ಸ್ಥಾನ, ಗ್ರೇಟ್‌ವಾರಿಯರ್ಸ್ ತೃತೀಯ ಸ್ಥಾನ ಪಡೆದವು ಎಂದರು. ಕಾರ್ಯಕ್ರಮದಲ್ಲಿ ಪತ್ರಕರ್ತ ಅಪ್ಪುವೀರೇಶ್, ಅರಣ್ಯ ಇಲಾಖೆ ಅಧಿಕಾರಿ ರಾಜೇಶ್, ಡಾ.ಅನಿಲ್, ಅಂಜಲಿರಾಜು, ತಿಪ್ಪೇಸ್ವಾಮಿ(ಕಾಳಿಂಗ), ಪ್ರಶಾಂತ್, ಸಿಂಗ್, ಮಂಜುನಾಥ, ಲೋಕೇಶ್, ರಾಜೇಶ್, ಅತ್ರೀಶ್, ಲಿಂಗರಾಜು, ರಾಜು ಮುಂತಾದವರು ಉಪಸ್ಥಿತರಿದ್ದರು.



Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T